ಸಂಪುಟ : 8 ಸಂಚಿಕೆ : 208 ಪುಟ : 4 ಬೆಲೆ : 3.00 ಶನಿವಾರ ಸೆಪ್ಟೆಂಬರ್ 23, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 208 Pages : 4 Price : 3.00 Saturday September 23, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 23 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 05ರಲ್ಲಿ ನರಸಾಪೂರ ಆಶ್ರಯ ಕಾಲೋನಿಯ ಕೆಲವು ಭಾಗಗಳು, ವಾರ್ಡ್ ನಂ. 7ರಲ್ಲಿ ಪುಲಿಕೇಶಿ ರಸ್ತೆ, ವಾರ್ಡ್ ನಂ. 16, 21ರಲ್ಲಿ ಅಂಬೇಡ್ಕರ ನಗರ, ಅಬ್ಬಿಗೇರಿ ಲೈನ್, ಗುಡದೂರ ಸ್ವಾಮಿಯಮಠ ಎಡಭಾಗ, ಬಲಭಾಗ, ಕುಂಭೇಶ್ವರ ಭಾಗ-1,2,3,4 ಕುಷ್ಟರೋಗ ಕಾಲೋನಿಯ ಭಾಗ-1,2 ಸುಣ್ಣದ ಭಟ್ಟಿ ಭಾಗ-1,2 ಉಳಿದ ಕೆಲವು ಭಾಗಗಳು, ವಾರ್ಡ್ ನಂ. 29 ಭಾಂಡಗೆ ಲೈನ್, ಗುಂಪಿನಮನೆ ಲೈನ್, ವಾರ್ಡ್ ನಂ. 22ರಲ್ಲಿ ತಾಜನಗರ ಕೆಲವು ಭಾಗಗಳು, ವಾರ್ಡ್ ನಂ. 29ರಲ್ಲಿ ರಾಜೀವಗಾಂಧಿನಗರ 9ನೇ ಕ್ರಾಸ್‌ನಿಂದ 5ನೇ ಕ್ರಾಸ್‌ವರೆಗೆ ಕೆಲವು ಉಳಿದ ಭಾಗಗಳು

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸ ಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಸೆಪ್ಟೆಂಬರ್ 24 ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಹರಳಯ್ಯ ಉದ್ಯಾನವನದಲ್ಲಿ ಪರಶುರಾಮ ದೊಡ್ಡಮನಿ ಅವರಿಂದ "ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ" ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಶ್ರೀಮತಿ ಸಂಗೀತ ಹೂಗಾರ ಇವರಿಂದ "ಸುಗಮ ಸಂಗೀತ" ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಡೋಣಿ ಗ್ರಾಮದ ನಿಂಗಪ್ಪ ಎಚ್. ಗುಡ್ಡದ ಇವರಿಂದ "ಜಾನಪದ ಸಂಗೀತ" ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದನಗಳ ಮಾಲಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ದನಗಳ ಮಾಲಿಕರಿಗೆ ತಿಳಿಸುವುದೇನೆಂದರೆ, ಗದಗ-ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ಬೀದಿ ದನಗಳಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದಾಗಿ ಸಾಕಷ್ಟು ಸಾರ್ವಜನಿಕ ದೂರುಗಳು ಸ್ವೀಕೃತವಾಗಿವೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನಗರಸಭೆ ಸಾಮಾನ್ಯ ಸಭೆಯಲ್ಲಿ ಚರ್ಚಿಸಲಾಗಿ ಠರಾವು ನಂ: 143 ದಿನಾಂಕ: 20-12-2022 ರಲ್ಲಿ ಸದರ ಬೀದಿ ದನಗಳನ್ನು ಹಿಡಿದು ಶಿವಯೋಗಿ ಮಂದಿರದ/ಪಾಂಜರಪೋಳ ಪಶು ಪಾಲನಾ ಕೇಂದ್ರ ಇಲ್ಲಿ ಸ್ಥಳಾಂತರಿಸಲು ತೀರ್ಮಾನಿಸಿ ಠರಾವು ಪಾಸು ಮಾಡಲಾಗಿದ್ದು, ಅದರಂತೆ ಗದಗ-ಬೆಟಗೇರಿ ನಗರಸಭೆ ವತಿಯಿಂದ ಟೆಂಡರ್ ಕರೆದು ಸದರಿ ಬೀದಿ ದನಗಳನ್ನು ಹಿಡಿದು ಸ್ಥಳಾಂತರಿಸಲು ತಿರ್ಮಾನಿಸಲಾಗಿದೆ. ಅದರಂತೆ ಸದರ ಕಾರ್ಯವನ್ನು ತುರ್ತಾಗಿ ಪ್ರಾರಂಭಿಸುವುದು ಇದ್ದು ಒಂದು ವೇಳೆ ದನಗಳ ಮಾಲಿಕರು ತಮ್ಮ ದನಗಳನ್ನು ಬೀದಿಯಲ್ಲಿ ಬಿಟ್ಟ ಪಕ್ಷದಲ್ಲಿ ಸದರಿ ದನಗಳನ್ನು ಸೆಪ್ಟೆಂಬರ್ 27 ರೊಳಗಾಗಿ ತಮ್ಮ ತಾಬಾಕ್ಕೆ ತೆಗೆದುಕೊಳ್ಳತಕ್ಕದ್ದು, ತಪ್ಪಿದ್ದಲ್ಲಿ ಮುಂದೆ ಆಗುವ ಹಾನಿಗಳಿಗೆ ಗದಗ-ಬೆಟಗೇರಿ ನಗರಸಭೆ ಜವಾಬ್ದಾರಿಯಾಗುವುದಿಲ್ಲ ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ. 26ರಂದು ನೇರ ಸಂದರ್ಶನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ಸೆಪ್ಟೆಂಬರ್ 26 ರಂದು ಬೆಳಿಗ್ಗೆ 10 ರಿಂದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೂಮ್ ನಂಬರ್-215, ಜಿಲ್ಲಾಡಳಿತ ಭವನ ಗದಗ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಸದರಿ ನೇರ ಸಂರ್ದಶನದಲ್ಲಿ ಕ್ರೆಡಿಟ್ ಎಕ್ಸೆಸ್ ಗ್ರಾಮೀಣ ಕೋಟಾ ಲಿಮಿಟೆಡ್, ಕಿರಣ ಇನ್‌ಫೋಟೆಕ್ ಟ್ಯಾಲಿ ಎಕ್ಸಲೇಟರ್ ಕಂಪನಿಗಳು ಭಾಗವಹಿಸಲಿವೆ.

ನೇರ ಸಂರ್ದಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂವ್(ಬಯೋಡಾಟಾ)ಪ್ರತಿಗಳು, ಮತ್ತು ಆಧಾರ ಕಾರ್ಡ್ ಝೆರಾಕ್ಸ್‌ನೊಂದಿಗೆ ಭಾಗವಹಿಸಬಹುದು.

ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372-220609, 6363330688 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂದರ್ಶನದ ದಿನದಂದೇ ಮಾಡಿಸಬೇಕಾಗಿರುತ್ತದೆ.

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸ್ತುತ ಸಾಲಿನ ತೋಟಗಾರಿಕೆ ಇಲಾಖೆಯಿಂದ ಕೇಂದ್ರ ಪುರಸ್ಕೃತ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ತೋಟ ಗಾರಿಕೆ ಬೆಳೆಗಳಾದ ದಾಳಿಂಬೆ, ಬಾಳೆ, ಪೇರಲ, ಗೋಡಂಬಿ, ಅಂಜೂರ, ನೇರಳೆ, ಹುಣಸೆ ಹಣ್ಣುಗಳ ಪ್ರದೇಶ ವಿಸ್ತರಣೆ, ಹೈಬ್ರೀಡ್ ತರಕಾರಿ, ಮಾವು ಮತ್ತು ನಿಂಬೆ ಪುನಶ್ಚೇತನ ಕಾರ್ಯಕ್ರಮ, ಸಮುದಾಯ ಕೆರೆ ನಿರ್ಮಾಣ, ವೈಯಕ್ತಿಕ ನೀರು ಸಂಗ್ರಹಣಾ ಘಟಕ, ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ನೆರಳು ಪರದೆ ನಿರ್ಮಾಣ ಘಟಕ, ಪ್ಯಾಕ್ ಹೌಸ್ ಘಟಕ, ಈರುಳ್ಳಿ ಶೇಖರಣ ಘಟಕ, ಹಣ್ಣು, ತರಕಾರಿ, ತಳ್ಳುವ ಗಾಡಿಗಳಿಗೆ ಸಹಾಯಧನಕ್ಕಾಗಿ ಸೌಲಭ್ಯವಿದೆ.

ಆಸಕ್ತ ರೈತರು ಸಂಬಂಧಿಸಿದ ತಾಲೂಕು ತೋಟಗಾರಿಕೆ ಕಚೇರಿಗಳಿಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದು ಎಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ : 08372-295116 ಗೆ ಸಂಪರ್ಕಿಸಬಹುದಾಗಿದೆ.

### ಸಾಂಕ್ರಾಮಿಕ ರೋಗಕ್ಕೆ ತುತ್ತಾಗದಂತೆ ರೈತರು ಲಸಿಕೆ ಹಾಕಿಸಲು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕರೆ

# ಜಾನುವಾರುಗಳಿಗೆ ಕಾಲು ಬಾಯಿ ಲಸಿಕೆ ಹಾಕಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಜಾನುವಾರುಗಳು ಸಾಂಕ್ರಾಮಿಕ ರೋಗಕ್ಕೆ ತುತ್ತಾಗದಂತೆ ಮುಂಜಾಗ್ರತಾ ಕ್ರಮವಾಗಿ ಸೆ.26 ರಿಂದ ಅಕ್ಟೋಬರ್ 25 ರವರೆಗೆ ಜಾನುವಾರುಗಳಿಗೆ ಕಾಲುಬಾಯಿ ಬೇನೆ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲ ರೈತರು ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.



ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ಶುಕ್ರವಾರದಂದು ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 4ನೇ ಸುತ್ತಿನ ಕಾಲುಬಾಯಿ ಬೇನೆ ಲಸಿಕಾ ಕಾರ್ಯಕ್ರಮದ ನಿರ್ವಹಣಾ ಸಮಿತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬರಗಾಲ ಇರುವುದರಿಂದ ರೈತರು ಮೇವುಗಳನ್ನು ಸಂರಕ್ಷಿಸಿಟ್ಟುಕೊಳ್ಳಬೇಕು ಎಂದ ಜಿಲ್ಲಾಧಿಕಾರಿಗಳು, ಕಾಲುಬಾಯಿ, ಬೇನೆ ಲಸಿಕೆ ಹಾಕಿಸಲು ಜಾನುವಾರು ಮಾಲಿಕರು ತಮ್ಮಲ್ಲಿರುವ ತಪ್ಪು ಕಲ್ಪನೆಗಳನ್ನು ಬದಿಗೊತ್ತಿ, ಜಾನುವಾರುಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸುವ ಮೂಲಕ ಜಾನುವಾರುಗಳ ಆರೋಗ್ಯ ರಕ್ಷಣೆಗೆ ಮುಂದಾಗಬೇಕು. ಕಾಲುಬಾಯಿ – ಬೇನೆ ಲಸಿಕಾ ಕಾರ್ಯಕ್ರಮಕ್ಕೆ ಪಶು ಇಲಾಖೆಗೆ ಜೊತೆಗೆ ಗದಗ ಹಾಲು ಒಕ್ಕೂಟ ವ್ಯಾಪ್ತಿಯ ಸಿಬ್ಬಂದಿಗಳು ಹಾಗೂ ಸ್ಥಳೀಯ ಸಂಸ್ಥೆಯವರು ಸಮನ್ವಯದಿಂದ ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ರೈತರಿಗೆ ಲಸಿಕಾ ಕಾರ್ಯಕ್ರಮದ ಬಗ್ಗೆ ವ್ಯಾಪಕ ಪ್ರಚಾರ ಕೈಗೊಂಡು ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಬಿತ್ತಿಪತ್ರ ಬಿಡುಗಡೆ ಮಾಡಲಾಯಿತು.

ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ಎಚ್.ಬಿ.ಹುಲಗಣ್ಣವರ ಅವರು ಮಾತನಾಡಿ, ಸೆ.26 ರಿಂದ ಅಕ್ಟೋಬರ್ 25 ರವರೆಗೆ ಕಾಲುಬಾಯಿ ಲಸಿಕಾ ಕಾರ್ಯಕ್ರಮ ನಿಗದಿಪಡಿಸಲಾಗಿದೆ. ಜಿಲ್ಲೆಯಲ್ಲಿ ಅಂದಾಜು 192109 ಜಾನುವಾರುಗಳಿದ್ದು, 4ನೇ ಸುತ್ತಿನ ಲಸಿಕಾ ಅಭಿಯಾನದಲ್ಲಿ ಇಲಾಖೆಯ ಎಲ್ಲ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಮನೆ ಬಾಗಿಲಿಗೆ ಹೋಗಿ ಕಾಲುಬಾಯಿ ಲಸಿಕೆ ಹಾಕಲಿದ್ದಾರೆ ಎಂದು ಮಾಹಿತಿ ನೀಡಿದರು.

ಪ್ರತಿ ತಾಲೂಕಿನಲ್ಲಿ ಲಸಿಕಾ ವೇಳಾ ಪಟ್ಟಿ ಮತ್ತು ಜಾನುವಾರು ಹೊಂದಿರುವ ರೈತರ ಮಾಹಿತಿಯನ್ನು ಗ್ರಾಮವಾರು ತಯಾರಿಸಲಾಗಿದೆ. ಗ್ರಾಮಗಳ ಹೆಸರು, ಜಾನುವಾರುಗಳ ಸಂಖ್ಯೆ, ಜಾನುವಾರು ಮಾಲಿಕರ ಹೆಸರು, ಮೊಬೈಲ್ ಸಂಖ್ಯೆ, ಆಧಾರ ಸಂಖ್ಯೆ, ಲಸಿಕಾದಾರರ ವಿವರ ಹಾಗೂ ಜಾನುವಾರುವಿನ ಕಿವಿ ಓಲೆ, ಸಂಖ್ಯೆ ವಿವರಗಳನ್ನು ಲಭ್ಯವಿರುತ್ತವೆ. ಪ್ರತಿ ಗ್ರಾಮ ಅಥವಾ ನಗರ ಪ್ರದೇಶ 100 ರಿಂದ 120 ಜಾನುವಾರುಗಳಿಗೆ ಒಂದು ಬ್ಲಾಕ್ ಎಂದು ವರ್ಗೀಕರಿಸಿ ಒಟ್ಟು 2598 ಬ್ಲಾಕ್‌ಗಳಲ್ಲಿ ಲಸಿಕಾದಾರರು ಲಸಿಕೆ ಹಾಕಲಿದ್ದಾರೆ. ಜಿಲ್ಲೆಗೆ ಸರಬರಾಜಾದಂತಹ ಪೋಸ್ಟರ್, ಬ್ಯಾನರ್‌ಗಳನ್ನು ಹಾಗೂ ಅವಶ್ಯವಿರುವ ತುರ್ತು ಔಷಧಿ ಮತ್ತು ರಾಸಾಯನಿಕಗಳನ್ನು ಹಂಚಿಕೆ ಮಾಡಿ ಲಸಿಕಾ ಕಾರ್ಯಕ್ರಮದ ಯಶಸ್ವಿಗೆ ತಯಾರು ಮಾಡಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ, ಜಿಲ್ಲಾ ಸಹಕಾರಿ ಹಾಲು ಒಕ್ಕೂಟದ ಅಧಿಕಾರಿಗಳು, ಪಶು ಸಂಗೋಪನಾ ಇಲಾಖೆಯ ಮುಖ್ಯ ಪಶುವೈದ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಎಲ್ಲಾ ತಾಲೂಕಿನ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರು ಉಪಸ್ಥಿತರಿದ್ದರು.

### ತಮಿಳುನಾಡಿಗೆ ಕಾವೇರಿ ನೀರು ಬಿಡದಂತೆ ಒತ್ತಾಯಿಸಿ ಕರವೇ ಕಾರ್ಯಕರ್ತರಿಂದ ಆಕ್ರೋಶ

# ಪುನಃ ನೀರು ಹರಿಸಿದರೆ ಉಗ್ರ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ತಮಿಳುನಾಡಿಗೆ ಕಾವೇರಿ ನೀರು ಬಿಡದಂತೆ ಒತ್ತಾಯಿಸಿ ಗದಗ ಜಿಲ್ಲಾ ಘಟಕದ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ಅಂಚೆ ಕಚೇರಿಗೆ ಮುತ್ತಿಗೆ ಹಾಕಿ ಶುಕ್ರವಾರ ಪ್ರತಿಭಟನೆ ನಡೆಸಿ, ಕಾವೇರಿ ನಿರ್ವಹಣಾ ಪ್ರಾಧಿಕಾರದ ಆದೇಶ ವಿರೋಧಿಸಿ ಘೋಷಣೆಗಳನ್ನು ಕೂಗುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.



ಶರಣು ಗೋಡಿ ಮಾತನಾಡಿ, ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಎಂದೂ ಕಾಣದಷ್ಟು ಬರಗಾಲದ ಸ್ಥಿತಿ ನಿರ್ಮಾಣವಾಗಿದೆ. ವಾಡಿಕೆಯಂತೆ ಮಳೆ ಆಗಿಲ್ಲ. ಈಗಾಗಲೇ 236 ತಾಲ್ಲೂಕುಗಳ ಪೈಕಿ 192 ತಾಲ್ಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗಿದೆ. ಕೃಷ್ಣರಾಜಸಾಗರ ಜಲಾಶಯದಲ್ಲಿ ಉಳಿದಿರುವುದು ಕೇವಲ 20 ಟಿಎಂಸಿ ನೀರು. ಅದರಲ್ಲಿ ಬಳಕೆಗೆ ಸಿಗುವುದು ಕೇವಲ 15 ಟಿಎಂಸಿ ಮಾತ್ರ. ಇಂಥ ಸಂದರ್ಭದಲ್ಲಿ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರ ಪ್ರತಿ ದಿನ 5 ಟಿಎಂಸಿಯಷ್ಟು ನೀರನ್ನು ತಮಿಳುನಾಡಿಗೆ ಹರಿಸಲು ಆದೇಶಿಸಿರುವುದು ಆಘಾತಕಾರಿಯಾಗಿದೆ ಎಂದರು.

ಮುಂದುವರೆದು ಮಾತನಾಡಿ, ಕಾವೇರಿ ನಿರ್ವಹಣಾ ಪ್ರಾಧಿಕಾರದ ಆದೇಶವನ್ನು ರಾಜ್ಯ ಸರ್ಕಾರ ಯಾವ ಕಾರಣಕ್ಕೂ ಪಾಲಿಸಬಾರದು. ನಾಡಿನ ಜನರ ಜೀವಗಳಿಗಿಂತ ಯಾವುದೋ ಪ್ರಾಧಿಕಾರದ ಆದೇಶ ದೊಡ್ಡದಲ್ಲ. ಈ ಪ್ರಾಧಿಕಾರದ ಆದೇಶ ಪಾಲಿಸಲು ಹೋಗಿ ಅವರು ಕೇಳಿದಷ್ಟು ನೀರನ್ನು ಇದುವರೆಗೆ ಬಿಟ್ಟಿದ್ದೇ ರಾಜ್ಯ ಸರ್ಕಾರದ ದೊಡ್ಡ ತಪ್ಪು. ಈಗಲೂ ▸▸3ನೇ ಪುಟಕ್ಕೆ

### 550 ಸ್ಮಾರಕಗಳನ್ನು ಖಾಸಗಿ ವಲಯ ದತ್ತು ಸ್ವೀಕರಿಸಲು ಅನುಮತಿ- ಸಚಿವ ಎಚ್.ಕೆ.ಪಾಟೀಲ

# ಪ್ರವಾಸೋದ್ಯಮ ಉತ್ತೇಜನಕ್ಕೆ 500 ಕೋಟಿಗೂ ಹೆಚ್ಚು ಹೂಡಿಕೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಖಾಸಗಿ ವಲಯಗಳು ಸ್ವಯಂ ಪ್ರೇರಿತವಾಗಿ ಕರ್ನಾಟಕದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು 500 ಕೋಟಿ ರೂಪಾಯಿಗೂ ಅಧಿಕ ಹೂಡಿಕೆ ಮಾಡಲು ಬದ್ಧವಾಗಿದ್ದು ಸರ್ಕಾರವು ಅವುಗಳ ಅನುಕೂಲಕ್ಕೆ ತಕ್ಕಂತೆ ಕಾರ್ಯನಿರ್ವಹಿಸಲಿದೆ ಎಂದು ಕಾನೂನು, ಸಂಸದೀಯ ಮತ್ತು ಪ್ರವಾಸೋದ್ಯಮ ವ್ಯವಹಾರಗಳ ಸಚಿವ ಹೆಚ್ ಕೆ ಪಾಟೀಲ್ ಹೇಳಿದ್ದಾರೆ.




ಬೆಂಗಳೂರಿನಲ್ಲಿ ಡಿಸೆಂಬರ್ 14 ರಿಂದ 16 ರವರೆಗೆ ನಡೆಯಲಿರುವ 'ದಕ್ಷಿಣ ಭಾರತ್ ಉತ್ಸವ'ಕ್ಕೆ ಮುನ್ನ ಪೂರ್ವ ಕಿರು ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ರಾಜ್ಯದಲ್ಲಿ ಸುಮಾರು 550 ಸ್ಮಾರಕಗಳನ್ನು ರಕ್ಷಿಸಲು, ಸಂರಕ್ಷಿಸಿ ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆಯನ್ನು ರೂಪಿಸಿದ್ದು, ಇಷ್ಟು ಸ್ಮಾರಕಗಳು ಖಾಸಗಿ ವಲಯಗಳಿಗೆ ದತ್ತು ಸ್ವೀಕಾರಕ್ಕೆ ಲಭ್ಯವಿದೆ. ಈ ಸ್ಮಾರಕಗಳು, ದೇವಾಲಯಗಳು, ಚರ್ಚ್‌ಗಳು, ಮಸೀದಿಗಳು ಮತ್ತು ಇತರ ಪಾರಂಪರಿಕ ▸▸3ನೇ ಪುಟಕ್ಕೆ

## ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆಗೆ ನೀರು ಬಿಡುಗಡೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನರಗುಂದ ಹಾಗೂ ರೋಣ ತಾಲೂಕಿನ ಗ್ರಾಮಗಳ ಜನ-ಜಾನುವಾರುಗಳಿಗೆ ಕುಡಿಯುವ ಉದ್ದೇಶಕ್ಕಾಗಿ ಮಲಪ್ರಭಾ ನೀರಾವರಿ ಸಲಹಾ ಸಮಿತಿಯು ಮಲಪ್ರಭಾ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆಗೆ 750 ಕ್ಯೂಸೆಕ್ಸ್ ನೀರನ್ನು ಸೆ.22 ರ ಬೆಳಿಗ್ಗೆ 8 ಗಂಟೆಯಿಂದ 15 ದಿನಗಳವರೆಗೆ ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆ ಮೂಲಕ ನೀರನ್ನು ಹರಿಸಲು ಸಭೆಯಲ್ಲಿ ನಿರ್ಣಯಿಸಲಾಗಿದೆ.



ನವಿಲು ತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆಗೆ ಬಿಡಲಾದ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಬೇಕು. ಬೇರೆ ಯಾವುದೇ ಉದ್ದೇಶಕ್ಕೆ ಬಳಸಿಕೊಳ್ಳದಂತೆ ನಿಗಾ ವಹಿಸುವುದರ ಜೊತೆಗೆ ಮಲಪ್ರಭಾ ಬಲದಂಡೆ ಕಾಲುವೆಯ ಪಾತ್ರದಲ್ಲಿ ಸಾರ್ವಜನಿಕರು ▸▸3ನೇ ಪುಟಕ್ಕೆ

### 13ನೇ ಪುಣ್ಯಸ್ಮರಣೆಯ ಗುರು ಗುಣ ಗಾನ ಕವಿಗೋಷ್ಠಿ, ಸಂಗೀತ ಸಮಾರಂಭ

# ಪಂ.ಪುಟ್ಟರಾಜರಿಗೆ 'ಸಾವಿರದ ಶರಣು ಸಮರ್ಪಣೆ' ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ, ಕಲಾ ವಿಕಾಸ ಪರಿಷತ್ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಸೆ.24, ರವಿವಾರ ಬೆಳಿಗ್ಗೆ 10.30ಕ್ಕೆ ನಗರದ ಶ್ರೀ ಅಡವೀಂದ್ರ ಸ್ವಾಮಿಮಠದಲ್ಲಿ ಡಾ. ಪಂ. ಪುಟ್ಟರಾಜ ಗುರುವರ್ಯರಿಗೆ 'ಸಾವಿರದ ಶರಣು ಸಮರ್ಪಣೆ', 13ನೇ ಪುಣ್ಯಸ್ಮರಣೆಯ ಗುರು ಗುಣ ಗಾನ ಕವಿಗೋಷ್ಠಿ ಮತ್ತು ಸಂಗೀತ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.



ಸಮಾರಂಭದ ದಿವ್ಯ ಸಾನಿಧ್ಯವನ್ನು ಶ್ರೀ ಮ.ಘ.ಚ. ಅಭಿನವ ಪಂಚಾಕ್ಷರ ಶಿವಾಚಾರ್ಯರು ಬೃಹನ್ಮಠ ಅಡ್ನೂರು, ರಾಜೂರು, ಗದಗ ಇವರು ವಹಿಸಿಕೊಳ್ಳುವರು. ಹೊಸಹಳ್ಳಿಮಠದ ಧರ್ಮದರ್ಶಿಗಳಾದ ಪೂಜ್ಯಶ್ರೀ ಮಹೇಶ್ವರ ಸ್ವಾಮೀಜಿ ಹೊಸಹಳ್ಳಿಮಠ ಇವರ ಸಮ್ಮುಖದಲ್ಲಿ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ್ ಸಮಾರಂಭದ ಉದ್ಘಾಟನೆ ಮಾಡಲಿದ್ದಾರೆ.

ಶ್ರೀ ವೀರೇಶ್ವರ ಪುಣ್ಯಾಶ್ರಮದ ಶಶಿಧರ ಕಲಬುರ್ಗಿ, ಪ್ರದೀಪಕುಮಾರ ನೆರ್ತಿ ಇವರುಗಳು ಗುರು ಗುಣ ಗಾನ ಸಂಗೀತ ಸೇವೆ ಸಲ್ಲಿಸಲಿದ್ದಾರೆ. ಶಶಿಕುಮಾರ ಅವರಾದ ಇವರು ತಬಲಾಸಾಥ ನೀಡಲಿದ್ದಾರೆ. ಗದಗ ತಾಲೂಕಾ ಕಸಾಪ ಕಾರ್ಯದರ್ಶಿ ಪ್ರೊ. ಬಸವರಾಜ ನೆಲಜೇರಿ ಕಾರ್ಯಕ್ರಮ ನಿರೂಪಣೆ ಮಾಡುವರು.

ಎಂ.ಡಿ. ಮಾದರ, ಮಂಜುಳಾ ವೆಂಕಟೇಶಯ್ಯ, ಭಾಗ್ಯಶ್ರೀ ಹುರಕಡ್ಲಿ, ಪ್ರೊ. ಬಸವರಾಜ ನೆಲಜೇರಿ, ಅನಸೂಯಾ ಮಿಟ್ಟಿ, ಕೆ.ಜೆ ಹೊನ್ನಾದೇವಿ, ಮಹಾಂತೇಶ ಮಲ್ಲಾರಿ ಸೊರಟೂರ, ಈಶ್ವರಪ್ಪ ಕುರಿ ಮೆಣಸಗಿ, ಕಲಾಶ್ರೀ ಹಾದಿಮನಿ ನರಗುಂದ, ಮರುಳಸಿದ್ದಪ್ಪ ದೊಡ್ಡಮನಿ ಹುಲಕೋಟಿ, ರೇಖಾ ಕನ್ನಡತಿ ಹೊಸಪೇಟೆ, ನೀಲಮ್ಮ ಅಂಗಡಿ, ಬಸವರಾಜ ನಾಗೂರು ಮುದ್ದೇಬಿಹಾಳ, ಆರ್.ಬಿ ಪ್ರಿಯಾಂಕ ರಾಯಚೂರು, ಸೋಮಶೇಖರ ಬಾರ್ಕಿ, ಎಚ್.ಬಿ ಶೆಡ್ಲಗೇರಿ, ವಿಜಯಲಕ್ಷ್ಮೀ ವಡ್ಡಟ್ಟಿ ಬೆಳವಣಕಿ, ಚಂದ್ರಪ್ಪ ಬಾರಂಗಿ ಹಾವೇರಿ, ಹುಚ್ಚೀರಪ್ಪ ವೀರಪ್ಪ ಈಟಿ ಗಜೇಂದ್ರಗಡ, ಶಿವಾನಂದ ಎನ್. ಹೊನಗುಡಿ, ಅಕ್ಕಮಹಾದೇವಿ ಕಮತ, ಭೀಮಾಂಬಿಕಾ ವಾಲಿ ಬಾಗಲಕೋಟೆ, ಮಲ್ಲಿಕಾರ್ಜುನ ಪೂಜಾರ ಹಾತಲಗೇರಿ, ಶಿವಾನಂದ ಫ.ಭಜಂತ್ರಿ ಇವರುಗಳಿಂದ ಭಕ್ತಿಗೀತೆ, ವಚನ ಗೋಷ್ಠಿ ನಡೆಯಲಿದೆ. ಕವಿಗೋಷ್ಠಿಯನ್ನು ಶಿವಾನಂದ ಫ.ಭಜಂತ್ರಿ ನಿರೂಪಿಸುವರು ಎಂದು ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಾ. ದೇವು ಹಡಪದ ಮುಂಡರಗಿ ಇವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಪ್ರಾ. ಕೆ.ಹೆಚ್ ಬೇಲೂರ, ಡಾ.ಎಸ್.ವಾಯ್ ಚಿಕ್ಕಟಿ, ಡಾ. ಶಕುಂತಲಾ ಸಿಂಧೂರ, ಡಾ. ರಶ್ಮಿ ಅಂಗಡಿ ಮುಖ್ಯಅತಿಥಿಗಳಾಗಿ ಆಗಮಿಸಲಿದ್ದಾರೆ. ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ವೇ. ಚನ್ನವೀರಸ್ವಾಮಿ ಹಿರೇಮಠ (ಕಡಣಿ) ಇವರು ನುಡಿ ನಮನ ಸಲ್ಲಿಸಲಿದ್ದಾರೆ. ಡಾ. ಪಂ.ಪುಟ್ಟರಾಜ ಸೇವಾ ಸಮಿತಿ ಗದಗ ಜಿಲ್ಲಾಧ್ಯಕ್ಷ ಮಂಜುನಾಥ ಹಳ್ಳೂರಮಠ ಬೆಳಧಡಿ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

## ಸಾಕ್ಷಿ ಸುಭಾಷಿತ

ದೇವರು ಯಾವಗಲೂ ಎಲ್ಲ ಕಡೆಯಲ್ಲೂ
ಇರುವುದು ಸಾಧ್ಯವಿಲ್ಲ: ಆದ್ದರಂದಲೇ ಅವರು
ತಾಯಿಂದಿರನ್ನು ಸೃಷ್ಟಿಸಿದ.
–ಎಡ್ವಿನ್ ಅರ್ನಾಲ್ಡ್

## ಸಂಪಾದಕೀಯ

# ಬಿಜೆಪಿ – ಜೆಡಿಎಸ್ ಮೈತ್ರಿ; ಯಾರಿಗೆ ಲಾಭ?

ಕರ್ನಾಟಕದ ಪ್ರಾದೇಶಿಕ ಪಕ್ಷ ಜಾತ್ಯಾತೀತ ಜನತಾದಳ ಪಕ್ಷ ಭಾರತೀಯ ಜನತಾ ಪಕ್ಷವನ್ನು ಸೇರಿಕೊಳ್ಳುತ್ತಿದೆ. ಅಂದರೆ ಎನ್‌ಡಿಎ ಮೈತ್ರಿಕೂಟದ ಭಾಗವಾಗಿ ಜೆಡಿಎಸ್ ಸೇರ್ಪಡೆಯಾಗುವುದು ಈಗ ನಿಶ್ಚಯವಾಗಿದೆ.

ಆದರೆ ಈ ಎರಡು ಪಕ್ಷಗಳ ಮೈತ್ರಿಕೂಟದಿಂದ ಯಾರಿಗೆ ಲಾಭ ಆಗಲಿದೆ ಎನ್ನುವುದು ಇಂದಿನ ಬಹುದೊಡ್ಡ ಚರ್ಚೆ. ಅಸಲಿಗೆ ಎರಡು ಪಕ್ಷಗಳಿಗೂ ಈಗ ಅಸ್ತಿತ್ವದ ಪ್ರಶ್ನೆ. ಹೀಗಾಗಿ ಎರಡು ಪಕ್ಷಗಳು ತಮ್ಮ ಲಾಭಕ್ಕಾಗಿ ಮೈತ್ರಿ ಮಾಡಿಕೊಳ್ಳುತ್ತಿವೆ. ಯಾರಿಗೆ ಲಾಭ ಎನ್ನುವುದು ಲೋಕಸಭೆ ಚುನಾವಣೆ ಫಲಿತಾಂಶದ ನಂತರವೇ ಸ್ಪಷ್ಟವಾಗಲಿದೆ.

ರಾಜ್ಯದಲ್ಲಿ ನಡೆದಿರುವ ಈ ಎರಡು ಪಕ್ಷಗಳ ಮೈತ್ರಿ ಎರಡು ಪಕ್ಷಗಳ ರಾಜ್ಯ ನಾಯಕರಿಗೆ ಅಸಹನೀಯವಾಗಿದೆ ಎನ್ನುವುದು ಗೊತ್ತಾಗುತ್ತದೆ. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಸೇರಿದಂತೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಬಗ್ಗೆ ಮಾತನಾಡುತ್ತಿಲ್ಲ.

ರಾಜ್ಯ ಬಿಜೆಪಿ ನಾಯಕರು ಮೈತ್ರಿಯ ಬಗ್ಗೆ ಆರಂಭದಲ್ಲಿ ಒಂದೆರಡು ಮಾತುಗಳನ್ನು ಆಡಿದರು. ಆದರೆ ಹೈಕಮಾಂಡ್ ಸೂಚನೆ ಮೇರೆಗೆ ಯಾರೊಬ್ಬರೂ ಪ್ರತಿಕ್ರಿಯೆ ಕೊಡುತ್ತಿಲ್ಲ.

ರಾಜ್ಯ ಬಿಜೆಪಿ ನಾಯಕರು ಒಲ್ಲದ ಮನಸ್ಸಿನಿಂದ ಮೈತ್ರಿಗೆ ಮುಂದಾಗಿದ್ದಾರೆ. ಮೈತ್ರಿಯ ಮಾತುಕತೆಗಳೆಲ್ಲವೂ ಅಮಿತ್ ಶಾ ನೇತೃತ್ವದಲ್ಲಿ ನಡೆದಿರುವುದು ರಾಜ್ಯ ನಾಯಕರ ಅಸಮಾಧಾನಕ್ಕೆ ಕಾರಣವಾಗಿದೆ.

ವೈಯಕ್ತಿಕ ಲಾಭ ನಷ್ಟ ಮತ್ತು ಪ್ರತಿಷ್ಠೆಯ ಕಾರಣಕ್ಕೆ ಮೈತ್ರಿ ಒಲ್ಲದ ಮನಸ್ಸಿನಿಂದ ನಡೆಯುತ್ತಿದೆ. ಇದರಿಂದ ಕಾಂಗ್ರೆಸ್ ಪಕ್ಷಕ್ಕೆ ಯಾವುದೆ ನಷ್ಟ ಇಲ್ಲ. ಆದರೆ ಯಾರಿಗೆ ಲಾಭ ಎನ್ನುವುದೇ ಯಕ್ಷ ಪ್ರಶ್ನೆ.

'ಭಾರತ ಯಾತ್ರೆ' ಗದುಗಿಗೆ । ಸಭಾ ಕಾರ್ಯಕ್ರಮದಲ್ಲಿ ಬಸವರಾಜ ಗುರಿಕಾರ

# ಪಿಂಚಣಿ ಭದ್ರತೆ ಕಾಯ್ದೆ ತಿದ್ದುಪಡಿಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಳೇ ಪಿಂಚಣಿ ಯೋಜನೆಗೆ ಆಗ್ರಹಿಸಿ, ಪಿಂಚಣಿ ಭದ್ರತೆ ಕಾಯ್ದೆ ತಿದ್ದುಪಡಿ ಮಾಡಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯಾದ್ಯಂತ ನಡೆದಿರುವ ಬೃಹತ್ ಹೋರಾಟದ 'ಭಾರತ ಯಾತ್ರೆ'ಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ ಎಂದು ನವದೆಹಲಿಯ ಅಖಿಲ ಭಾರತ ಶಿಕ್ಷಕರ ಫೆಡರೇಶನ್‌ನ ಕಾರ್ಯಾಧ್ಯಕ್ಷ ಬಸವರಾಜ ಗುರಿಕಾರ ಹೇಳಿದರು.

ಅವರು ಶುಕ್ರವಾರ ಗದುಗಿನ ಸರಕಾರಿ ನೌಕರರ ಭವನದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಬೆಂಗಳೂರು, ಜಿಲ್ಲಾ ಘಟಕ ಗದಗ ಹಾಗೂ ಅಖಿಲ ಭಾರತ ಪ್ರಾಥಮಿಕ ಶಿಕ್ಷಕರ ಫೆಡರೇಷನ್ ನವದೆಹಲಿ ಕೈಗೊಂಡಿರುವ 'ಭಾರತ ಯಾತ್ರೆ' ಗದುಗಿಗೆ ಆಗಮಿಸಿದ ಸಂದರ್ಭದಲ್ಲಿ ಏರ್ಪಡಿಸಿದ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಈ ಕಾಯ್ದೆ ತಿದ್ದುಪಡಿ ಮಾಡದ ಹೊರತು ಹಣವನ್ನು ಮರಳಿಸಲಾಗದು ಎಂಬ ವಿಚಾರ ಬಂದಾಗ ಅನಿವಾರ್ಯವಾಗಿ ರಾಷ್ಟ್ರದಾದ್ಯಂತ ಹೋರಾಟವನ್ನು ರೂಪಿಸಲಾಗಿದೆ. ಈ ಹೋರಾಟದಲ್ಲಿ ಜಯ ಸಿಗುವುದೆಂಬ ವಿಶ್ವಾಸ ನಮ್ಮದು. ಕೇಂದ್ರ ಸರಕಾರದ ವೇತನ ಶ್ರೇಣಿ ಕರ್ನಾಟಕ ರಾಜ್ಯದ ಶಿಕ್ಷಕರಿಗೆ ಸಿಕ್ಕಿಲ್ಲ. ಈ ಕುರಿತು ಹೋರಾಟ ಮುಂದುವರೆಯಲಿದೆ ಎಂದರು.



ಕರಾಪ್ರಾಶಾಶಿ ಸಂಘದ ರಾಜ್ಯಾಧ್ಯಕ್ಷ ಕೆ.ನಾಗೇಶ, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ, ಅಖಿಲ ಭಾರತ ಶಿಕ್ಷಕರ ಫೆಡರೇಶನ್ ಉಪಾಧ್ಯಕ್ಷೆ ರಮಾದೇವಿ, ಕಾರ್ಯದರ್ಶಿ ಸೀಮಾ, ಖಜಾಂಚಿ ಶ್ರೀಹರಿ ಗೋವಿಂದ, ನವೀನ ಸಂಗ್ವಾ, ಗದಗ ಜಿ.ಸ.ನೌ ಸಂಘದ ಅಧ್ಯಕ್ಷ ರವಿ ಗುಂಜೀಕರ ಮಾತನಾಡಿ, ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ನೌಕರರೆಂಬ ಬೇಧ–ಭಾವ ಮಾಡದೇ ಏಕರೂಪ ವೇತನ ಪದ್ಧತಿ ಜಾರಿಗೊಳಿಸಿ, ಶಿಕ್ಷಕ ವಿರೋಧಿ ನೀತಿಗಳನ್ನು ಕೈ ಬಿಡಬೇಕು ಎಂದರು.

ವೇದಿಕೆಯ ಮೇಲೆ ಗದಗ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವ್ಹಿ.ಎಂ ಹಿರೇಮಠ, ಪಿ.ಎಚ್ ಕಡಿವಾಲ, ಮಂಜುನಾಥ ಹುಯಿಲಗೋಳ, ಜಿ.ಹನುಮಂತಪ್ಪ, ಕೆ.ಬಿ ಕೊಣ್ಣೂರ, ಎಸ್.ಸಿ ನಾಗರಳ್ಳಿ, ಪಿ.ಸಿ ಪೂಜಾರ ಉಪಸ್ಥಿತರಿದ್ದರು. ಮುತ್ತು ಮಾದರ ಪ್ರಾರ್ಥಿಸಿದರು, ವ್ಹಿ.ಎಂ ಹಿರೇಮಠ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪಿ.ಬಿ ಮುಧೋಳಮಠ ನಿರೂಪಿಸಿದರು. ಎಸ್.ಆರ್ ಬಂಡಿ ವಂದಿಸಿದರು.

ನಾಗರಾಜ ಪಾಟೀಲ, ಗಂಗಾಧರ ಗೌಡರ, ಭೋಜರಾಜ ಹಡಪದ, ಪಿ.ವೀರಪ್ಪ, ಮಹೇಶ ಕುರಿಯವರ, ಎ.ಕೆ ಒಂಟಿ, ಎಂ.ವೈ ಚಕ್ರಸಾನಿ, ಮೋಹನ ಮೆಣಸಿನಕಾಯಿ, ಮಹಾಲಕ್ಷ್ಮೀ ತೊಂಡಿಹಾಳ, ಬಸಮ್ಮ ಹರ್ತಿ, ಶಿವಯೋಗಿ ಬಂಡಿ, ಎಸ್.ಕೆ ಮಂಗಳಗುಡ್ಡ, ವೈ.ಡಿ ಗಾಣಿಗೇರ, ವ್ಹಿ.ಎ ಹಾದಿಮನಿ, ಎಸ್.ವ್ಹಿ ಮಠದ ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಘಟಕಗಳ ಪದಾಧಿಕಾರಿಗಳು, ಶಿಕ್ಷಕ–ಶಿಕ್ಷಕಿಯರು ಪಾಲ್ಗೊಂಡಿದ್ದರು.

# ಮೂರ್ತಿಗಳ ಮೆರವಣಿಗೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಭಾಪೂರ ಮುಖ್ಯ ರಸ್ತೆಯಲ್ಲಿರುವ ಕೇಶವ ಪಾರ್ಕ್‌ನಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅಷ್ಟಭುಜ ಈಶ್ವರ ಹಾಗೂ ನಂದಿ ಮೂರ್ತಿಗಳ ಮೆರವಣಿಗೆ ಸೆ.24ರ ಬೆಳಿಗ್ಗೆ 8ಕ್ಕೆ ವೀರೇಶ್ವರ ಪುಣ್ಯಾಶ್ರಮದಿಂದ ಪ್ರಾರಂಭವಾಗಿ ಕೇಶವ ಪಾರ್ಕ್‌ವರೆಗೆ ಜರುಗಲಿದೆ.

ಮೆರವಣಿಗೆಯಲ್ಲಿ 101 ಮುತ್ತೈದೆಯರಿಂದ ಪೂರ್ಣಕುಂಭ ಮೇಳ ಜರುಗಲಿದ್ದು, ಪ್ರಮುಖ ಆಕರ್ಷಣೆಯಾಗಿ ಭಟ್ಕಳದ ಮಾರುತಿ ಚಂಡೆ ಮೇಳ ಪಾಲ್ಗೊಳ್ಳಲಿದೆ. ಕೇಶವ ಪಾರ್ಕ್, ಪುಟ್ಟರಾಜ ನಗರ, ಪುಣೇಕರ ಬಡಾವಣೆ, ಜಿ.ಎಸ್ ಪಾಟೀಲ ಹಾಗೂ ಇನ್ನುಳಿದ ಬಡಾವಣೆಗಳ ಸಮಸ್ತ ಗುರು–ಹಿರಿಯರು ಪಾಲ್ಗೊಳ್ಳಬೇಕು ಎಂದು ಬಡಾವಣೆಯ ಸಿದ್ದಗಂಗಾ ಶ್ರೀ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಸದಸ್ಯರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಸಮಸ್ಯೆಗೆ ಸ್ಪಂದಿಸಿದ ಗದಗ ಬೆಟಗೇರಿ ಪೌರಾಯುಕ್ತರು



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜುಮ್ಮಾ ಮಸೀದಿ ಹತ್ತಿರ ವಾಲ್ ಸಮಸ್ಯೆಯಿಂದ ನೀರು ಚರಂಡಿ ಸೇರಿ ಪೋಲಾಗುತ್ತಿದ್ದರಿಂದ ಇಲ್ಲಿನ ಸಾರ್ವಜನಿಕರಿಗೆ ಸಮಸ್ಯೆಯಾಗಿತ್ತು.

ಈ ಸಮಸ್ಯೆಯನ್ನು ಕರವೇ ಯುವ ಘಟಕದ ಕಾರ್ಯದರ್ಶಿ ವಿನಾಯಕ್ ಬದಿರವರು ಗದಗ–ಬೆಟಗೇರಿ ನಗರಸಭೆಯ ಪೌರಾಯುಕ್ತರ ಗಮನಕ್ಕೆ ತಂದು, ಸರಿಪಡಿಸುವಂತೆ ಮನವಿ ಮಾಡಿದ್ದರು.

ಮನವಿಗೆ ಸ್ಪಂದಿಸಿದ ಪೌರಾಯುಕ್ತರು ಕೂಡಲೇ ಸಂಬಂಧಪಟ್ಟವರಿಗೆ ತಿಳಿಸಿ, ದುರಸ್ಥಿ ಕಾರ್ಯ ಕೈಗೊಂಡರು. ಪೌರಾಯುಕ್ತರ ಸ್ಪಂದನೆಗೆ ಕರವೇ ಕಾರ್ಮಿಕ ಘಟಕದ ವತಿಯಿಂದ ಅಭಿನಂದನೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಮಿಕ ಘಟಕದ ಶಹರ ಪ್ರಧಾನ ಕಾರ್ಯದರ್ಶಿ ತೌಸೀಫ್ ಢಾಲಾಯತ, ದಾವಲಸಾಬ್ ತಹಸೀಲ್ದಾರ್, ಇಸಾಕ್ ನದಾಫ್, ಆಜಾದ್ ಮುಂತಾದವರು ಉಪಸ್ಥಿತರಿದ್ದರು.

# ಹಜರತ್ ಬಿಲಾಲ ಮಸ್ಜೀದ್ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹೊಂಬಳ ರಸ್ತೆಯ ಜನತಾ ಕಾಲೋನಿಯಲ್ಲಿರುವ ಹಜರತ ಬಿಲಾಲ ಮಸ್ಜೀದಿಯಲ್ಲಿ ನಡೆದ ಸಭೆಯಲ್ಲಿ ಸನ್ 2023–26ವರೆಗೆ ಮಸ್ಜೀದಿನ ಕಮಿಟಿಯನ್ನು ಆಯ್ಕೆ ಮಾಡಲಾಯಿತು.



ಚೇರಮನ್‌ರಾಗಿ ಮೆಹಬೂಬಅಲಿ ಎಚ್.ಬಳ್ಳಾರಿ, ಕಾರ್ಯದರ್ಶಿ ರಶೀದಸಾಬ ಎ.ಗೋಕಾವಿ, ಸಹ ಕಾರ್ಯದರ್ಶಿಯಾಗಿ ಮಸ್ತಾನಅಲಿ ಎಂ.ಶಿರಹಟ್ಟಿ, ನಿರ್ದೇಶಕರುಗಳಾಗಿ ಮೆಹಬೂಬಸಾಬ ಆರ್.ಢಾಲಾಯತ, ಮಾಬುಸಾಬ ಐ.ಹುಲ್ಲೂರ, ಹಾಜಿಅಲಿ ಎಚ್.ಕೊಪ್ಪಳ, ಸಿಕಂದರಸಾಬ ಎಂ.ಇಸ್ಮಾಯಲನವರ, ಅಬ್ದುಲ್‌ರಸೂಲಸಾಬ ಎ.ಬಳ್ಳಾರಿ, ಚಾಂದಸಾಬ ಎಚ್.ಬದಾಮಿ, ದಾವಲಸಾಬ ಎಂ.ಅಬ್ಬಿಗೇರಿ, ರಾಜೇಸಾಬ ಬಿ.ತಹಸೀಲ್ದಾರ, ರಫೀಕಸಾಬ ಎ.ಗದ್ವಾಲ್ ಆಯ್ಕೆಯಾಗಿದ್ದಾರೆ ಎಂದು ನಿರ್ದೇಶಕ ಹಾಜಿಅಲಿ ಎಚ್.ಕೊಪ್ಪಳ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಪೋಷಣ್ ಮಾಸಾಚರಣೆ



■ ವಿಜಯಸಾಕ್ಷಿ ಸುದ್ದಿ, ನರಗುಂದ

ಶಿಶು ಅಭಿವೃದ್ಧಿ ಯೋಜನೆ, ನರಗುಂದ ವತಿಯಿಂದ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ನರಗುಂದ ಶಿದ್ದನಭಾವಿ ಓಣಿಯ ಬಸವೇಶ್ವರ ದೇವಸ್ಥಾನದಲ್ಲಿ ಅಂಗನವಾಡಿ ಕೇಂದ್ರ ಸಂಖ್ಯೆ ನರಗುಂದ–7ರ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ಮೊದಲ ಗರ್ಭಿಣಿಯರಿಗೆ ಸೀಮಂತ ಹಾಗೂ 6 ತಿಂಗಳು ಪೂರ್ಣಗೊಳಿಸಿದ ಮಕ್ಕಳಿಗೆ ಅನ್ನಪ್ರಾಶನ ಕಾರ್ಯಕ್ರಮ ನಡೆಸಲಾಯಿತು. ಪ್ರಾಸ್ತಾವಿಕವಾಗಿ ಮೇಲ್ವಿಚಾರಕಿ ಜಯಶ್ರೀ ಅಂಗಡಿ ಮಾತನಾಡಿದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರದೀಪ ನಾಡಗೇರ ಮಾತನಾಡಿ, ಐಸಿಡಿಎಸ್ ಯೋಜನೆಯಿಂದ ಮಹಿಳೆ ಮತ್ತು ಮಕ್ಕಳಿಗೆ ಸಿಗುವ ಸೌಲಭ್ಯಗಳು, ವಯಕ್ತಿಕ ಸ್ವಚ್ಛತೆ, ಕಾಲಕಾಲಕ್ಕೆ ಆರೋಗ್ಯ ತಪಾಸಣೆಯ ಮಹತ್ವಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯರಾದ ಜೆ.ಆರ್ ಕದಂ, ಸಂಗಪ್ಪ ಪೂಜಾರ, ಶ್ರೀದೇವಿ ಗಡೇಕಾರ, ಬಸಪ್ಪ ಸವದತ್ತಿ, ಆರೋಗ್ಯ ಇಲಾಖೆಯ ಭಾರತಿ ಮಾರಿಹಾಳ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿ, ಬಾಣಂತಿಯರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

ಕಾರ್ಯಕ್ರಮ ಸಂಯೋಜಕ ಮಂಜುನಾಥ ಗುಗ್ಗರಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# 23ನೇ ವಾರ್ಡ್‌ನಲ್ಲಿ ಕಲುಷಿತ ನೀರು ಪೂರೈಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಯ 23ನೇ ವಾರ್ಡಿನಲ್ಲಿರುವ ಹನಮನ ಗರಡಿ ಎದುರಿನ ಎಸ್‌ಎಸ್ ಖಾಜೀಯವರ ಮನೆಯ ಹತ್ತಿರದ ಬಡಾವಣೆಯಲ್ಲಿ ನಗರಸಭೆಯಿಂದ ಪೂರೈಕೆಯಾಗುವ ಕುಡಿಯುವ ನೀರು ಸಂಪೂರ್ಣ ಕಲುಷಿತವಾಗಿದ್ದು, ಬಡಾವಣೆಯ ನಾಗರಿಕರು ನೀರನ್ನು ಸಂಗ್ರಹಿಸಲೂ ಆಗದೇ, ಹಾಗೆಯೇ ಬಿಡಲೂ ಆಗದ ಸಂದಿಗ್ಧದಲ್ಲಿ ಸಿಲುಕಿದರು.



ತಡವಾಗಿ ಸ್ಥಳಕ್ಕಾಗಮಿಸಿದ ವಾರ್ಡ್‌ನ ನಗರಸಭೆ ಸದಸ್ಯರಾದ ಜನಾಬ ಬರಕತಲಿ ಮುಲ್ಲಾ ಹಾಗೂ ನಗರಸಭೆಯ ಅಭಿಯಂತರರು ಮಲಮೂತ್ರ ಮಿಶ್ರಿತ ಚರಂಡಿ ನೀರು ಪೂರೈಕೆಯಾಗುತ್ತಿರುವದನ್ನು ಖಚಿತಪಡಿಸಿಕೊಂಡು, ತುರ್ತಾಗಿ ದುರಸ್ಥಿ ಕಾರ್ಯ ಕೈಗೊಳ್ಳುತ್ತೇವೆ ಎಂದು ತಿಳಿಸಿದರು. ಈ ದಿನ ಸರಬರಾಜಾದ ನೀರನ್ನು ತಜ್ಞ–ರಿಂದ ಪರೀಕ್ಷಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಕುಡಿಯಲು ಯೋಗ್ಯವಾದ ನೀರನ್ನು ಪೂರೈಸಲು ಮುಂದಾಗಬೇಕೆಂದು ಸೌಜನ್ಯತಾ ಸಮಗ್ರ ನಾಗರಿಕ ಹಿತರಕ್ಷಣಾ ಸಮಿತಿಯ ಸಂಸ್ಥಾಪಕ ಅಧ್ಯಕ್ಷರು ಮತ್ತು ವಕೀಲರಾದ ರಾಘವೇಂದ್ರ ಪಾಲನಕರ ಪ್ರಕಟನೆಯ ಮೂಲಕ ಜನಾಗ್ರಹವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸೌಜನ್ಯತಾ ಸಮಿತಿಯ ಅಧ್ಯಕ್ಷೆ ಸಹನಾ ರಾಘವೇಂದ್ರ ಪಾಲನಕರ, ರೇಣವ್ವ ಬೋವಿ, ಹನಮವ್ವ ಬೋವಿ, ಅಶ್ಪಾಕ್ ಖಾಜೀ, ಉದಯ ರಾಯಕರ, ಶೇಖ ಮುಂತಾದವರು ಉಪಸ್ಥಿತರಿದ್ದರು.

# ರಾಷ್ಟ್ರಮಟ್ಟದ ಟಗರಿನ ಪಂದ್ಯಾವಳಿ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಎಸ್.ಎಮ್ ಕೃಷ್ಣಾ ನಗರದ ಆಶ್ರಯ ಕಾಲೋನಿ 1ನೇ ವಾರ್ಡಿನ ಶ್ರೀ ಗಜಾನನ ಯುವಕ ಸೇವಾ ಸಮಿತಿ ವತಿಯಿಂದ 11ನೇ ವರ್ಷದ ಗಜಾನನೋತ್ಸವದ ನಿಮಿತ್ತ ಶನಿವಾರ ಮುಂಜಾನೆ 10.30ಕ್ಕೆ ಎಸ್.ಎಂ ಕೃಷ್ಣಾ ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.12ರ ಆವರಣದಲ್ಲಿ ರಾಷ್ಟ್ರಮಟ್ಟದ ಟಗರಿನ ಪಂದ್ಯಾವಳಿ ಜರುಗಲಿದೆ.

ಗದಗ ಜಿಲ್ಲಾ ಕಾಂಗ್ರೆಸ್ ಯುವ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್.ಪಾಟೀಲ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಜಿಲ್ಲಾ ಯುವ ಘಟಕ ಹಾಗೂ ಶ್ರೀ ಗಜಾನನ ಯುವಕ ಸೇವಾ ಸಮಿತಿ ಅಧ್ಯಕ್ಷರಾದ ಅನಿಲಕುಮಾರ್ ಸಿದ್ದಮ್ಮನಹಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ನಗರಸಭೆ ಸದಸ್ಯರಾದ ಲಕ್ಷ್ಮೀ ಅನಿಲಕುಮಾರ ಸಿದ್ದಮ್ಮನಹಳ್ಳಿ, ಶಕುಂತಲಾ ಹೊಳೆ ಬಸಪ್ಪ ಅಕ್ಕಿ, ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಗಾಯತ್ರಿ ವಸಂತ ಸಿದ್ದಮ್ಮನಹಳ್ಳಿ, ಗದಗ ಜಿಲ್ಲಾ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಬಸವರಾಜ ಕಡೆಮನಿ, ಶ್ರೀ ಆದಿಕವಿ ಮಹರ್ಷಿ ವಾಲ್ಮೀಕಿ ವಿವಿಧೋದ್ದೇಶಗಳ ಸೇವಾ ಸಂಘ ಎಸ್‌ಟಿ ಘಟಕ ಹಾಗೂ ಜಿಲ್ಲಾ ಕಾಂಗ್ರೆಸ್ ಎಸ್‌ಟಿ ಘಟಕದ ಉಪಾಧ್ಯಕ್ಷರಾದ ವಸಂತ ಸಿದ್ದಮ್ಮನಹಳ್ಳಿ ಆಗಮಿಸಲಿದ್ದಾರೆ. ಅತಿಥಿಗಳಾಗಿ ಸೋಮನಗೌಡ ಆರ್.ಪಾಟೀಲ, ಹೊಳೆಬಸಪ್ಪ ಕೆ.ಅಕ್ಕಿ, ದುಡ್ಡುಗೌಡ ಪಾಟೀಲ, ಮಹಾಂತೇಶ ಮಣ್ಣಮ್ಮನವರ, ಶೇಖರ ರಾಟಿ, ಉಮಾರ ಫಾರೂಕ್ ಬಾರಿಗಿಡ, ರಾಜೇಸಾಬ ಕನಿಕ್ಯಾನವರ್, ಎಲ್.ಎಫ್ ಮುಲ್ಲಾನವರ, ಸಿದ್ದಪ್ಪ ಹೊಸಳ್ಳಿ, ಸಿದ್ದಲಿಂಗಯ್ಯ ನಮಸ್ತೆಮಠ, ರಾಜು ಕವಳಿಕಾಯಿ, ಪರಶುರಾಮ್ ಬಳ್ಳಾರಿ, ರಾಮಪ್ಪ ಹೊಟ್ಟಿ, ಪ್ರಭು ಶಾಹಪುರ್, ಕಾಶಪ್ಪ ಅಂಗಡಿ, ಈರಣ್ಣ ಬೆಳಮಕರ್, ಜನಾರ್ದನ ಹವಳೆ, ಸೋಮಣ್ಣ ಚೋರಗಸ್ತಿ ಆಗಮಿಸಲಿದ್ದಾರೆ ಎಂದು ಸಮಿತಿಯ ಪ್ರಧಾನ ಕಾರ್ಯದರ್ಶಿ ವೀರೇಶ ಗಡಾದ ತಿಳಿಸಿದ್ದಾರೆ.

ವಿನಾಯಕ ನಗರದಲ್ಲಿ ನಿವೃತ್ತ ಶಿಕ್ಷಕರಿಗೆ ಗೌರವ ಸನ್ಮಾನ

# ಯುವಕರು ದೇಶಸೇವೆಯ ಭಾವನೆ ಬೆಳೆಸಿಕೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಿನಾಯಕ ನಗರ ಅಭಿವೃದ್ಧಿ ಸಮಿತಿ ವತಿಯಿಂದ ಗಜಾನನೋತ್ಸವ ಹಾಗೂ ಶಿಕ್ಷಕರ ದಿನಾಚರಣೆಯ ಅಂಗವಾಗಿ ವಿನಾಯಕ ನಗರದಲ್ಲಿ ವಾಸಿಸುವ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ವಿಶೇಷ ರೀತಿಯಲ್ಲಿ ಗಣೇಶೋತ್ಸವವನ್ನು ಆಚರಿಸಿ ಗಮನ ಸೆಳೆದರು.

ಗುರುವಾರ ನಡೆದ ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ಎಂ.ವಿ ವಾಲಿ, ಎಸ್.ಎಫ್ ಘಂಟಾಮಠ, ಎನ್.ಎ ಗಿರಡ್ಡಿ, ಕೆ.ಎಸ್ ಯರಗುಪ್ಪಿ, ಎಸ್.ಬಿ ಸಭಾವಡೆಯರಮಠ, ಸಿ.ಎಫ್ ಗುರಿಕಾರ, ಆರ್.ಎನ್ ನವಲೆ, ಶಕುಂತಲಾ ಹೊರಟ್ಟಿ ಅವರುಗಳನ್ನು ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಶಿಕ್ಷಕರು, ನಗರದ ಅಭಿವೃದ್ಧಿಯಲ್ಲಿ ಯುವಕರ ಪಾತ್ರ ಮುಖ್ಯವಾಗಿದೆ. ನೀವು ಮಾಡುವ ಕಾರ್ಯ ಎಲ್ಲರೂ ನೋಡುವಂತಿರಬೇಕು. ಯುವ ಪೀಳಿಗೆ ಮುಂದೆ ಬಂದು ದೇಶಸೇವೆಯ ಭಾವನೆ ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ವಿನಾಯಕ ನಗರ ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ ಮಾತನಾಡಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಚಂಬಣ್ಣ ಬಾಳಿಕಾಯಿ, ವೀರಭದ್ರಯ್ಯ ಹಿರೇಮಠ, ಸಿ.ವಿ ಹಿರೇಮಠ, ರಾಘವೇಂದ್ರ ಕಡೆಮನಿ, ಎಸ್.ಸಿ ನೇಕಾರ, ನಿರಂಜನ ವಾಲಿ, ಸತೀಶ ಪಾಟೀಲ, ರುದ್ರುಮುನಿ ಘಂಟಾಮಠ, ನಿಜಗುಣಿ ಗಾಂಜಿ, ಎಂ.ಎಂ ಎಲಿಮಠ, ಜಗದೀಶ ಆಚಾರ್ಯ, ಜವಾಹರಲಾಲ ಪವಾರ, ಪರಮೇಶ ಬಾಳಿಕಾಯಿ, ಪಂಚಯ್ಯ ಸಾಲಿಮಠ, ವೀರೇಶ ಸಾಸಲವಾಡ, ಮಹಾಂತೇಶ ಯಾಳಗಿ, ವಿಠ್ಠಲ ಬದಿ ಸೇರಿದಂತೆ ಪದಾಧಿಕಾರಿಗಳು, ವಿನಾಯಕ ನಗರದ ನಿವಾಸಿಗಳು ಇದ್ದರು.

ಕಾರ್ಯಕ್ರಮದ ಆರಂಭದಲ್ಲಿ ಇತ್ತೀಚೆಗೆ ನಿಧನರಾದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ, ಕಸಾಪ ಮಾಜಿ ಜಿಲ್ಲಾಧ್ಯಕ್ಷ ದಿ. ಪ್ರೊ.ಸಿ.ವ್ಹಿ ಕೆರಿಮನಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

# ಗಣೇಶ ಹಬ್ಬದ ಪ್ರಯುಕ್ತ ರಕ್ತ ದಾನ ಶಿಬಿರ



■ ವಿಜಯಸಾಕ್ಷಿ ಸುದ್ದಿ, ಗದಗ

ಸಮಿಪದ ಹರ್ಲಾಪೂರ ಗ್ರಾಮದ ಶ್ರೀ ಗೋಣಿ ಬಸವೇಶ್ವರ ಯುವಕ, ಭಜನಾ ಸಂಘದ ವತಿಯಿಂದ ಗಣೇಶ ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ರಕ್ತದಾನ ಹಾಗೂ ರಕ್ತ ತಪಾಸಣಾ ಶಿಬಿರವನ್ನು ಡಾ. ವೈಕುಂಠ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ರೋಹಿತ್ ಚವ್ಹಾಣ ಅವರು ಮಾತನಾಡಿ, ದಾನಗಳಲ್ಲಿ ಶ್ರೇಷ್ಠ ದಾನ ರಕ್ತದಾನ. ಆರೋಗ್ಯವಂತ ಯುವಕರು ವರ್ಷದಲ್ಲಿ ಎರಡು ಬಾರಿ ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ಆರೋಗ್ಯ ಹೊಂದಬಹುದಲ್ಲದೆ, ಇನ್ನೊಬ್ಬರ ಜೀವವನ್ನು ಕಾಪಾಡಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಂಘದ ಹಿರಿಯರಾದ ನೀಲಪ್ಪ ಕಿಂದ್ರಿ ಮಾತನಾಡಿ, ಗಣೇಶ ಹಬ್ಬದ ಪ್ರಯುಕ್ತ ರಕ್ತದಾನ ಶಿಬಿರದಲ್ಲಿ ಸುಮಾರು 36 ಯುವಕರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದ್ದು, ಹಾಗೂ ಸಾವಿರಕ್ಕೂ ಹೆಚ್ಚು ಜನರು ರಕ್ತ ಪರೀಕ್ಷೆ ಮಾಡಿಸಿಕೊಂಡಿದ್ದಾರೆ ಎಂದರು. ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರಾದ ಮಹಾಲಿಂಗಪ್ಪ ಹಂಚಿನಾಳ, ಫಕೀರಪ್ಪ ಹುಯಿಲಗೋಳ, ಸಂತೋಷ ಕೋಡನಹಳ್ಳಿ, ಸುಲೈಮಾನ ಸೈಪಣ್ಣನವರ, ಸಾದಿಕ್ ಹಬ್ಬಣೆ, ಮಂಜುನಾಥ ಹುಯಿಲಗೋಳ, ಅಜಯ ವಡ್ಡರ, ಮಹಾಂತೇಶ ಕೋಗವಾಡ, ಲಾಲು ನದಾಫ ಮುಂತಾದವರು ಪಾಲ್ಗೊಂಡಿದ್ದರು. ಸಂತೋಷ ಕೋಡನಹಳ್ಳಿ ನಿರೂಪಿಸಿದರು. ಯಮನೂರಸಾಬ ಬಾಲೇಸಾಬನವರ ವಂದಿಸಿದರು.



ಗದಗ ತಾಲೂಕಿನ ನಾಗಾವಿ ತಾಂಡಾ ಸಮೀಪವಿರುವ ಶ್ರೀ ಜಲಾಶಂಕರ ತೀರ್ಥಕ್ಷೇತ್ರ ದೇವಸ್ಥಾನದ ಅರ್ಚಕರಾದ ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ) ಅವರ ಸ್ವಗೃಹದಲ್ಲಿ ಐದು ಹೆಡೆಯ ಸರ್ಪದಲ್ಲಿ ಕುಳಿತಿರುವ ಶ್ರೀ ಗಣೇಶ ಮೂರ್ತಿಯನ್ನು ವಿವಿಧ ಬಗೆಯ ಅಲಂಕರಾದಿಂದ ಪ್ರತಿಷ್ಠಾಪಿಸಲಾಗಿದೆ.

# ಗಣೇಶ ಹಬ್ಬದ ಪ್ರಯುಕ್ತ ಪೊಲೀಸ್ ಪಥಸಂಚಲನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗಣೇಶ ಚತುರ್ಥಿ ಪ್ರಯುಕ್ತ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ನಾಗರಾಜ ಗಡಾದ ನೇತೃತ್ವದಲ್ಲಿ ಶುಕ್ರವಾರ ಪೊಲೀಸ್ ಪಥಸಂಚಲನ ನಡೆಯಿತು.

ಗಣೇಶ ಹಬ್ಬವನ್ನು ಶಾಂತಿಯುತವಾಗಿ ಆಚರಿಸು ನಿಟ್ಟಿನಲ್ಲಿ ಮುನ್ನೆಚ್ಚರಿಕೆಯಾಗಿ ಪಟ್ಟಣದ ಪೊಲೀಸ್ ಠಾಣೆಯಯಿಂದ ಪ್ರಾರಂಭವಾದ ಪಥಸಂಚಲನ, ಗ್ರಾಮದೇವತೆ ದೇವಸ್ಥಾನ, ಗಜಾನನ ದೇವಸ್ಥಾನ, ದರ್ಗಾ, ಹಳೆ ಬಸ್ ನಿಲ್ದಾಣ, ಜಕ್ಕಲಿ ಕ್ರಾಸ್ ಬಸ್ ನಿಲ್ದಾಣ, ಪಟ್ಟಣ ಪಂಚಾಯಿತಿ ಮೂಲಕ ಪುನಃ ಠಾಣೆಗೆ ತಲುಪಿ ಮುಕ್ತಾಯಗೊಂಡಿತು.

ಪಥಸಂಚಲನದಲ್ಲಿ ಎಎಸ್‌ಐ ಕೆ.ಆರ್ ಬೇಲೇರಿ, ಎಎಸ್‌ಐ ಎಚ್.ಎಂ ಕರಡಿಗುಡ್ಡ, ವಿ.ಎಸ್ ಬಡಿಗೇರ, ಎನ್.ಡಿ ತಹಸೀಲ್ದಾರ, ಎಸ್.ವಿ ನಾಳ್ಕರ, ಆರ್.ಎಸ್ ಕಪ್ಪತ್ತನವರ, ಎಂ.ಎನ್ ಮಾಟರಂಗಿ, ವಿ.ಎಸ್ ಗೋದಿಗನೂರ, ಆರ್.ಡಿ ರುದ್ರಾಕ್ಷಿ, ಎಂ.ಎಸ್ ಪೂಜಾರ, ಯು.ಎಂ ಬಂಗಾರಿ, ಕೆ.ವಿ ಹಿರೇಮಠ, ಎಂ.ವೈ ಉಪ್ಪಾರ, ರೋಷನ್ ಜಮೀರ, ಎಸ್.ಎಸ್ ಘಾಟಗೆ, ವಿ.ಟಿ ಬೋವಿ, ಎಸ್.ಆರ್ ನದಾಫ್, ಎಸ್.ಸಿ ಶಿವಶಿಂಪರ, ವಿ.ಟಿ ರಾಠೋಡ ಸೇರಿದಂತೆ ಗೃಹ ರಕ್ಷಕ ದಳದ ಸಿಬ್ಬಂದಿಗಳು ಇದ್ದರು.

# ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಿ: ಎಸ್‌ಪಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಈಗಾಗಲೇ ಜಿಲ್ಲೆಯಾದ್ಯಂತ ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳು ಶಾಂತಿಯುತವಾಗಿ ಗಣೇಶ ಪ್ರತಿಷ್ಠಾಪನೆ ಮಾಡಿದ್ದಾರೆ. ಮುಂಬರುವ ಈದ್-ಮಿಲಾದ್ ಹಬ್ಬವನ್ನು ಸಹ ಕೋಮು-ಸೌಹಾರ್ದತೆಯಿಂದ, ಶಾಂತಿಯುತವಾಗಿ ಆಚರಿಸಿ ಪೊಲೀಸ್ ಇಲಾಖೆಗೆ ಸಹಕಾರ ನೀಡಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ ಹೇಳಿದರು.

ಅವರು ಗುರುವಾರ ಶಿರಹಟ್ಟಿ ಪೊಲೀಸ್ ಠಾಣೆಗೆ ಭೇಟಿ ನೀಡಿ, ಇಲಾಖೆಯ ಅಧಿಕಾರಿಗಳೊಂದಿಗೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದಕ್ಕೆ ಅಗತ್ಯ ಸಲಹೆ-ಸೂಚನೆ ನೀಡಿ ಮಾತನಾಡಿದರು.

ವಿವಿಧ ಹಂತಗಳಲ್ಲಿ ಗಣೇಶ ವಿಸರ್ಜನೆಯಾಗಲಿದ್ದು, ಅದಕ್ಕಾಗಿ ಜಿಲ್ಲೆಯಾದ್ಯಂತ 3 ಕೆಎಸ್‌ಆರ್‌ಪಿ ತುಕಡಿ, 10 ಜಿಲ್ಲಾ ಸಶಸ್ತ್ರ ಮೀಸಲು ಪಡೆ, 300 ಹೋಮ್‌ಗಾರ್ಡ್ ಮತ್ತು ಸಿವಿಲ್ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು. ಸಾರ್ವಜನಿಕರಿಗೆ ತೊಂದ-ರೆಯಾಗದಂತೆ ನಿಗದಿತ ಸಮಯದಲ್ಲಿ ಗಣೇಶ ವಿಸರ್ಜನೆ ಮಾಡಬೇಕು. ಕಾನೂನಿನ ನಿಯಮಾವಳಿಗಳಿಗೊಳಪಟ್ಟು ಎಲ್ಲರೂ ಹಬ್ಬಗಳನ್ನು ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಬೇಕೆಂದು ಹೇಳಿದರು.

ಡಿಎಸ್‌ಪಿಗಳಾದ ಎಂ.ಬಿ ಸಂಕದ, ವಿದ್ಯಾಧರ ನಾಯಕ, ಸಿಪಿಐ ನಾಗರಾಜ ಮಾಢಳ್ಳಿ, ಪಿಎಸ್‌ಐ ಈರಣ್ಣ ರಿತ್ತಿ ಉಪಸ್ಥಿತರಿದ್ದರು.

# ಸೂರ್ಯಕಾಂತಿಗೆ ಬೆಂಬಲ ಬೆಲೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ಸೂರ್ಯಕಾಂತಿಗೆ ಕ್ವಿಂಟಾಲ್‌ಗೆ 6,760 ರೂ. ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್ ತಿಳಿಸಿದ್ದಾರೆ.

ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ತೀರ್ಮಾನದಂತೆ, ಜಿಲ್ಲೆಯಲ್ಲಿ ಕೆಓಎಫ್ ಸಂಸ್ಥೆಯ ಎಣ್ಣೆಬೀಜ ಬೆಳೆಗಾರರ ಸಹಕಾರಿ ಸಂಘಗಳನ್ನು ಖರೀದಿ ಕೇಂದ್ರಗಳೆಂದು ಪರಿಗಣಿಸಲಾಗಿದೆ. ಜಿಲ್ಲೆಯ ಗದಗ ತಾಲೂಕಿನ ಬಳಗಾನೂರ, ಹೊಂಬಳ, ಹುಲಕೋಟಿ, ಶಿರಹಟ್ಟಿ ತಾಲೂಕಿನ ರಣತೂರ, ರೋಣ ತಾಲೂಕಿನ ಅಬ್ಬಿಗೇರಿ, ಸೂಡಿ, ನಿಡಗುಂದಿ, ನರಗುಂದ ತಾಲೂಕಿನ ಕಣಕಿಕೊಪ್ಪ, ಮುಂಡರಗಿ ತಾಲೂಕಿನ ಬರದೂರ ಕಲಕೇರಿ ಸೇರಿ 10 ಕೇಂದ್ರಗಳಲ್ಲಿ ರೈತರ ನೋಂದಣಿಯೊಂದಿಗೆ ಖರೀದಿ ಪ್ರಕ್ರಿಯೆ ಆರಂಭಿಸಲಾಗುವುದು.

ಪ್ರತಿ ರೈತರಿಂದ ಎಕರೆಗೆ 3 ಕ್ವಿಂಟಾಲ್‌ನಂತೆ ಗರಿಷ್ಠ 15 ಕ್ವಿಂಟಾಲ್ ಎಫ್‌ಎಕ್ಯೂ ಗುಣಮಟ್ಟದ ಸೂರ್ಯಕಾಂತಿಯನ್ನು ಖರೀದಿಸಲು ನಿರ್ಧರಿಸಲಾಗಿದೆ. ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರು, ಕೆಜಿಎಫ್ ಕೃಷ್ಣಾರೆಡ್ಡಿ ಮೇಟಿ (ಮೊ-9900553960) ಅವರನ್ನು ಸಂಪರ್ಕಿಸುವಂತೆ ತಿಳಿಸಿದ್ದಾರೆ.

**ಸೆ.25ರಂದು ಪಂ. ಪುಟ್ಟರಾಜ ಕವಿ ಗವಾಯಿಗಳವರ 13ನೇ ಪುಣ್ಯಸ್ಮರಣೋತ್ಸವ**


# 'ಶಿವಯೋಗಿ ಶ್ರೀ ಪುಟ್ಟರಾಜ' ಪ್ರಶಸ್ತಿ ಪ್ರದಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗಾನಯೋಗಿ ಡಾ. ಪಂ.ಪುಟ್ಟರಾಜ ಸೇವಾ ಸಮಿತಿ ವತಿಯಿಂದ ಪರಮಪೂಜ್ಯ, ಪದ್ಮಭೂಷಣ ಡಾ. ಪಂ.ಪುಟ್ಟರಾಜ ಕವಿ ಗವಾಯಿಗಳವರ 13ನೇ ಪುಣ್ಯಸ್ಮರಣೋತ್ಸವ, 'ಶಿವಯೋಗಿ ಶ್ರೀ ಪುಟ್ಟರಾಜ' ಪ್ರಶಸ್ತಿ ಪ್ರದಾನ ಹಾಗೂ ಅಹೋರಾತ್ರಿ ಸಂಗೀತ ಸ್ವರ ನಮನ ಕಾರ್ಯಕ್ರಮ ಸೆ.25ರಂದು ಸಂಜೆ 6.30 ಗಂಟೆಗೆ ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಜರುಗಲಿದೆ.

ಅಂದು ಸಂಜೆ 6.30 ಗಂಟೆಗೆ ಜರುಗುವ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಹಾನಗಲ್-ಯಮನವಳ್ಳಿ-ಹುಬ್ಬಳ್ಳಿಯ ಮೂರುಸಾವಿರ ಮಠದ ಜ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು, ಅಥಣಿ ಮೋಟಗಿಮಠದ ಪೂಜ್ಯಶ್ರೀ ಪ್ರಭು ಚನ್ನಬಸವ ಮಹಾಸ್ವಾಮಿಗಳು, ನಿಚ್ಚಣಿಕೆ ಮಡಿವಾಳೇಶ್ವರ ಮಠದ ಪೂಜ್ಯಶ್ರೀ ಪಂಚಾಕ್ಷರ ಮಹಾಸ್ವಾಮಿಗಳು ಹಾಗೂ ರಾಜೂರ-ಅಡ್ನೂರ-ಗದಗ ದಾಸೋಹ ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು.

ವೀರೇಶ್ವರ ಪುಣ್ಯಾಶ್ರಮದ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಅಧ್ಯಕ್ಷತೆವಹಿಸುವರು. ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಅಧ್ಯಕ್ಷ ಸಿದ್ದೇಶ್ವರ ಶಾಸ್ತ್ರಿಗಳು ತೆಲ್ಲೂರ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲ, ಮಾಜಿ ಸಚಿವ ಬಿ.ಶ್ರೀರಾಮುಲು, ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ, ನಗರಸಭೆ ಅಧ್ಯಕ್ಷೆ ಉಷಾ ದಾಸರ, ಬಿಜೆಪಿ ಮುಖಂಡ ಅನಿಲ್ ಅಬ್ಬಿಗೇರಿ, ಜಂಗಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಷಡಕ್ಷರಯ್ಯ ನವಲಿಹಿರೇಮಠ, ಬಿ. ಶ್ರೀರಾಮಲು ಅವರ ಆಪ್ತ ಸಹಾಯಕ ಎಸ್.ಎಚ್ ಶಿವನಗೌಡ್ರ, ಪಂಚಾಕ್ಷರಿ ಹಿಡ್ಕಿಮಠ, ರಾಜು ಗುಡಿಮನಿ, ಮುದಕಯ್ಯ ಸ್ವಾಮಿ ಹಿರೇಮಠ, ನವರತ್ನ ಜ್ಯವೆಲರ್ಸ್ ಮಾಲೀಕ ಸಿದ್ದಲಿಂಗೇಶ ಮೂರಶಿಳ್ಳಿನ, ಶ್ರೀಮತಿ ಜೋಹರ ಪೀರಸಾಬ ಕೌತಾಳ, ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕ ಹೇಮರಾಜ ಹೆಡಿಗ್ಗೊಂಡ, ಸಹ ವ್ಯವಸ್ಥಾಪಕ ಶರಣಯ್ಯಸ್ವಾಮಿ ಹಿಡ್ಕಿಮಠ, ಆರ್ ಶರಣಬಸವಶಾಸ್ತ್ರಿ ಇಲಕಲ್, ಶಿವಕುಮಾರಶಾಸ್ತ್ರಿ ಹಿರೇಮಠ, ಮಹೇಶ ದಾಸರ, ಕುಮಾರಸ್ವಾಮಿ ಹಿರೇಮಠ, ರಾಚಯ್ಯಸ್ವಾಮಿ ಹಿರೇಮಠ ಆಗಮಿಸುವರು.



ಸಾಹಿತಿ ಅಂದಾನಪ್ಪ ವಿಭೂತಿ ಅವರು ರಚಿಸಿದ 'ಬೆಟ್ಟವಾಗಿ ಬೆಳೆದ ಪುಟ್ಟರಾಜರು' ಗ್ರಂಥವನ್ನು ಪೂಜ್ಯರು ಬಿಡುಗಡೆ ಮಾಡುವರು. ಶಿವಲಿಂಗಯ್ಯಶಾಸ್ತ್ರಿ ಸಿದ್ದಾಪೂರ ಅವರು ಸಭಾ ನಿರೂಪಣೆ ಮಾಡುವರು. ಶಿವಯೋಗಿ ಶ್ರೀ ಪುಟ್ಟರಾಜ ಪ್ರಶಸ್ತಿ ಪ್ರದಾನ ಸಂದರ್ಭದಲ್ಲಿ ಕೊಪ್ಪಳದ ಲಿಂ. ರಾಜಶೇಖರಯ್ಯನವರು ಹಾಗೂ ಲಿಂ. ಮಾತೋಶ್ರೀ ನೀಲಾಂಭಿಕಾ ನವಲಿಮಹಿರೇಮಠ ಅವರ ಸ್ಮರಣಾರ್ಥ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಧಾರವಾಡದ ಡಿ. ಕುಮಾರದಾಸ ಗವಾಯಿಗಳಿಗೆ, ಮಾಜಿ ಸಚಿವ ಬಿ.ಶ್ರೀರಾಮುಲು ಅವರ ಮಾತೋಶ್ರೀ ದಿ. ಶ್ರೀಮತಿ ಹೊನ್ನೂರಮ್ಮ ಅವರ ಸ್ಮರಣಾರ್ಥ ಕಲಾಕ್ಷೇತ್ರದಲ್ಲಿ ಸಾಧನೆ ಮಾಡಿದ ಕರ್ನಾಟಕ ನಾಟಕ ಅಕಾಡೆಮಿಯ ಪ್ರಶಸ್ತಿ ಪುರಸ್ಕೃತರಾದ ರಾಜಣ್ಣ ಜೇವರ್ಗಿ ಅವರಿಗೆ, ಜ್ಯೋತಿಷ್ಯವಾಗ್ಮಿ ಪಂ. ಲಿಂ. ಚನ್ನವೀರ ಶಾಸ್ತ್ರಿಗಳು ಹಿಡ್ಕಿಮಠ ಅವರ ಸ್ಮರಣಾರ್ಥ ಪ್ರವಚನ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕಲಾಶ್ರೀ ಪ್ರಶಸ್ತಿ ಪುರಸ್ಕೃತರಾದ ಹಿರೇಮಲ್ಲೂರಿನ ವೇ. ಶಿವಮೂರ್ತಯ್ಯ ಶಾಸ್ತ್ರಿಗಳು ಹಿರೇಮಠವರಿಗೆ ಹಾಗೂ ದಿ. ಮಾತೋಶ್ರೀ ಸಿದ್ದಮ್ಮ ಕೋಂ.ಸಂಗಪ್ಪ ವಿ. ಗುಡಿಮನಿ ಅವರ ಸ್ಮರಣಾರ್ಥ ಸಮಾಜಸೇವಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕಲ್ಲೂರಿನ ನಿವೃತ್ತ ಸೀನಿಯರ್ ಅಸಿಸ್ಟಂಟ್ ನಿಂಗಪ್ಪ ಬುಳ್ಳಪ್ಪ ನರ್ಚಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಕಾರ್ಯದರ್ಶಿ ಬೆಟದಯ್ಯಶಾಸ್ತ್ರಿಗಳು ಹಿರೇಮ್ಯಾಗೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದೇ ಸಂದರ್ಭದಲ್ಲಿ ಹರಿಹರದ ಜಾಹ್ನವಿ ಕಾಟವೆ ಅವರಿಂದ ಭರತನಾಟ್ಯ ಜರುಗಲಿದೆ. ನಂತರ ಸ್ವರನಮನ ಕಾರ್ಯಕ್ರಮದಲ್ಲಿ ವೀರೇಶ್ವರ ಪುಣ್ಯಾಶ್ರಮದ ಶಿಷ್ಯ-ಪ್ರಶಿಷ್ಯರಿಂದ, ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂ. ಪಂಚಾಕ್ಷರಿ ಗವಾಯಿಗಳವರ ಸಂಗೀತ ಪಾಠಶಾಲೆ ಗದಗ, ಪಂ. ಪಂಚಾಕ್ಷರಿ ಗವಾಯಿಗಳವರ ಸಂಗೀತ ಮಹಾವಿದ್ಯಾಲಯ, ಪಂ. ಪಂಚಾಕ್ಷರಿ ಗವಾಯಿಗಳವರ ಅಂಧರ ವಸತಿಯುತ ಸಂಗೀತ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಂದ ಸ್ವರನಮನ ಕಾರ್ಯಕ್ರಮ ಜರುಗಲಿದೆ. ಸಂಗೀತ ಸಭಾ ನಿರೂಪಣೆಯನ್ನು ಕಲಬುರ್ಗಿಯ ಸಂಗಮೇಶ ಪಾಟೀಲ, ಹರ್ಲಾಪೂರಿನ ಸದಾನಂದ ಶಾಸ್ತ್ರಿಗಳು ನಿರ್ವಹಿಸುವರು.

# ಗಣೇಶ ಹಬ್ಬದ ನಿಮಿತ್ತ ಮದ್ಯ ಮಾರಾಟ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಾದ್ಯಂತ ಸೆಪ್ಟೆಂಬರ್ 19 ರಿಂದ ಗಣೇಶ ಹಬ್ಬವನ್ನು ಆಚರಿಸಲಾಗುತ್ತಿದ್ದು, ಅದರ ಅಂಗವಾಗಿ ಗದಗ-ಬೆಟಗೇರಿ ಅವಳಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ವಿಗ್ರಹಗಳನ್ನು ಪ್ರತಿಷ್ಠಾಪಿಸಿ 5,7,9,11 ದಿನಗಳಂದು ಗಣೇಶ ಮೂರ್ತಿಗಳನ್ನು ಆಯಾ ಸಂಘಟಿಕರು/ ಸಾರ್ವಜನಿಕರು ಮೆರವಣಿಗೆ ಮೂಲಕ ಸ್ಥಳೀಯ ಆಡಳಿತ ನಿಗದಿಪಡಿಸಿದ ಸ್ಥಳದಲ್ಲಿ ವಿಸರ್ಜನೆ ಕಾರ್ಯಕ್ರಮಗಳು ಜರುಗುತ್ತವೆ. ಸದರಿ ದಿನಾಂಕಗಳಂದು ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಸಂಬಂಧಪಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮದ್ಯ ಸಾಗಾಟ ಮತ್ತು ಮದ್ಯ ಮಾರಾಟ ನಿಷೇಧಿಸಿ ಆದೇಶ ಹೊರಡಿಸಲಾಗಿತ್ತು. ಆದರೆ ಮುಳಗುಂದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆ ಹಾಗೂ ಈದ್ ಮಿಲಾದ ಹಬ್ಬದ ಪ್ರಯುಕ್ತ ಮದ್ಯ ಸಾಗಾಟ ಮತ್ತು ಮದ್ಯ ಮಾರಾಟವನ್ನು ನಿಷೇಧಿಸಿ ಹೊರಡಿಸಿದ ಆದೇಶವನ್ನು ಮಾರ್ಪಾಡು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ದಿನಾಂಕಗಳಂದು ತಿದ್ದುಪಡಿ ಆದೇಶ ಹೊರಡಿಸಲಾಗಿದೆ.

ಮುಳಗುಂದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸೆಪ್ಟೆಂಬರ್ 22 ರಂದು ಮಧ್ಯಾಹ್ನ 1.30 ಗಂಟೆಯಿಂದ ಸೆಪ್ಟೆಂಬರ್ 23 ರ ಬೆಳಗಿನ 6 ಗಂಟೆಯವರೆಗೆ, ಸೆಪ್ಟೆಂಬರ್ 24 ರಂದು ಬೆಳಗಿನ 6 ಗಂಟೆಯಿಂದ ಸೆಪ್ಟೆಂಬರ್ 25 ರ ಬೆಳಗಿನ 6 ಗಂಟೆಯವರೆಗೆ, ಸೆಪ್ಟೆಂಬರ್ 26 ರಂದು ಬೆಳಗಿನ 6 ಗಂಟೆಯಿಂದ ಸೆಪ್ಟೆಂಬರ್ 27 ರ ಬೆಳಗಿನ 6 ಗಂಟೆಯವರೆಗೆ, ಈದ್ ಮಿಲಾದ್ ಹಬ್ಬದ ಪ್ರಯುಕ್ತ ಸೆಪ್ಟೆಂಬರ್ 28 ರಂದು ಬೆಳಗಿನ 6 ಗಂಟೆಯಿಂದ ಸೆಪ್ಟೆಂಬರ್ 29ರ ಬೆಳಗಿನ 6 ಗಂಟೆಯವರಗೆ ಮದ್ಯ ಮಾರಾಟ ಹಾಗೂ ಮದ್ಯ ಸಾಗಾಟ ನಿಷೇಧಿಸಲಾಗಿದೆ. ಉಳಿದಂತೆ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

# ಕನ್ನಡ ನಾಡು, ನುಡಿ ಸಂಸ್ಕೃತಿ ಬಿಂಬಿಸುವ ವಿಶಿಷ್ಟ ಲಾಂಛನ ಬಳಸಲು ಲಾಂಛನದ ಮಾದರಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣವಾಗಿ 50 ವರ್ಷ ಪೂರ್ಣಗೊಳ್ಳಲಿರುವ ಸುವರ್ಣ ಮಹೋತ್ಸವದ ಸುಸಂದರ್ಭದಲ್ಲಿ ಕರ್ನಾಟಕ ಸಂಭ್ರಮ 50 ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಶೀರ್ಷಿಕೆಯಡಿ ರಾಜ್ಯಾದ್ಯಂತ ವರ್ಷಪೂರ್ತಿ ವೈವಿಧ್ಯಮಯವಾಗಿ, ವರ್ಣಮಯವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಇದಕ್ಕೊಂದು ವಿಶೇಷ ಮೆರಗು ನೀಡಲು ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಉದ್ದೇಶಿಸಿದೆ. ಕಾರ್ಯಕ್ರಮದ ಸಂಭ್ರಮವನ್ನು ಹೆಚ್ಚಿಸಲು ಕನ್ನಡ ನಾಡು-ನುಡಿ-ಸಂಸ್ಕೃತಿಯನ್ನು ಬಿಂಬಿಸುವ ವಿಶಿಷ್ಟವಾದ ಲಾಂಛನ(ಲೋಗೊ)ವನ್ನು ಬಳಸಲು ತೀರ್ಮಾನಿಸಲಾಗಿದ್ದು, ಆಸಕ್ತರಿಂದ ಸುಂದರವಾದ ಲಾಂಛನ(ಲೋಗೊ)ದ ಮಾದರಿಗಳನ್ನು ಆಹ್ವಾನಿಸಲಾಗಿದೆ.


ಆಯ್ಕೆಯಾಗುವ ಮಾದರಿ ಲಾಂಛನಕ್ಕೆ ರೂ 25,000/- ಗಳ ಬಹುಮಾನವನ್ನು ನಿಗದಿಪಡಿಸಲಾಗಿದೆ.

ಲಾಂಛನ(ಲೋಗೊ)ದ ಮಾದರಿಯನ್ನು ಕಳುಹಿಸಲು ಸೆಪ್ಟೆಂಬರ್ 30 ರವರೆಗೆ ಅವಕಾಶವಿದೆ. ಆಸಕ್ತರು ಈ ಕುರಿತು ಅಗತ್ಯ ಮಾಹಿತಿಗಳನ್ನು ಇಲಾಖೆಯ ಜಾಲತಾಣ https://www.kannadasiri.karnataka.gov.in ದಲ್ಲಿ ಪಡೆಯಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮವಾಗಿ ಸಂಗ್ರಹಿಸಿದ್ದ ಅಕ್ಕಿ, ಹಾಲಿನ ಪುಡಿ ವಶಕ್ಕೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದಲ್ಲಿ ಅಕ್ರಮವಾಗಿ ಅಕ್ಕಿ ಸಂಗ್ರಹಿಸಿರುವ ಗೋಡೌನ್ ಮೇಲೆ ಆಹಾರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ದಾಳಿ ನಡೆಸಿ, ಅನ್ನಭಾಗ್ಯದ ಅಕ್ಕಿ ಮತ್ತು ಕ್ಷೀರಭಾಗ್ಯದ ಹಾಲಿನ ಪುಡಿಯನ್ನು ವಶಪಡಿಸಿಕೊಂಡ ಘಟನೆ ಶುಕ್ರವಾರ ನಡೆದಿದೆ.



ತಾಲೂಕು ಅಹಾರ ನಿರೀಕ್ಷಕ ಮಂಜುನಾಥ ತಳ್ಳಿಹಾಳ ಹಾಗೂ ಗಜೇಂದ್ರಗಡ ಪಿಎಸ್‌ಐ ಸೋಮನಗೌಡ ಗೌಡ್ರ ನೇತೃತ್ವದಲ್ಲಿ ಎಪಿಎಂಸಿ ಗೋದಾಮೊಂದರಲ್ಲಿ ಅಕ್ರಮ ಅಕ್ಕಿ ಸಂಗ್ರಹಣೆ ಮಾಡಲಾಗಿದೆ ಎಂಬ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದಾಗ, ಸಾರ್ವಜನಿಕ ಶಿಕ್ಷಣ ಇಲಾಖೆಯ 1 ಕೆಜಿ ತೂಕದ 180 ಪ್ಯಾಕೆಟ್ ಹಾಲಿನ ಪುಡಿ ಹಾಗೂ ಅನ್ನಭಾಗ್ಯ ಅಕ್ಕಿಯನ್ನು ಹೋಲುವ 51 ಚೀಲಗಳಲ್ಲಿರುವ 26.5 ಕ್ವಿಂಟಾಲ್ ತೂಕದ 90,100 ರೂ ಮೌಲ್ಯದ ಅಕ್ಕಿ ಚೀಲಗಳು ಸಿಕ್ಕಿವೆ. ಈ ಕುರಿತು ಗಜೇಂದ್ರಗಡ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪಟ್ಟಣದ ಎಪಿಎಂಸಿಯ ಗೋದಾಮಿನ ಮೇಲೆ ನಡೆದ ದಾಳಿ ವೇಳೆ 1 ಕೆಜಿ ತೂಕದ 180 ಪ್ಯಾಕೆಟ್ ಹಾಲಿನ ಪುಡಿ ಸಿಕ್ಕಿದ್ದು, ಸಾರ್ವಜನಿಕ ಶಿಕ್ಷಣ ಇಲಾಖೆಯದ್ದಾಗಿದೆ.

ಗಜೇಂದ್ರಗಡ ನೆರೆಯ ಜಿಲ್ಲೆ ಹಾಗೂ ತಾಲೂಕು ಕೇಂದ್ರಗಳಿಗೆ ಹತ್ತಿರವಿದ್ದು, ಎಲ್ಲ ಪ್ಯಾಕೆಟ್‌ಗಳ ಬ್ಯಾಚ್ ನಂಬರ್ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ರೋಣ ತಾಲೂಕು ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಬಸವರಾಜ ಅಂಗಡಿ ತಿಳಿಸಿದ್ದಾರೆ.

**ತಾಲೂಕಾ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಎಸ್.ವಿ ಸಂಕನೂರ ಕರೆ**

# ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಕ್ರೀಡೆ ಸಹಕಾರಿಯಾಗಿದೆ. ಆದರಿಂದ ಏನನ್ನಾದರೂ ಸಾಧಿಸಲು ಸಾಧ್ಯ. ಆರೋಗ್ಯ ಸಂಪತ್ತಿಗಿಂತ ಮಿಗಿಲಾದ ಸಂಪತ್ತು ಇಲ್ಲ. ಆದ್ದರಿಂದ, ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳು ಕ್ರೀಡಾ ಚಟುವಟಿಕೆಗಳಲ್ಲಿ ಹೆಚ್ಚು ಹೆಚ್ಚು ಭಾಗವಹಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ ಸಂಕನೂರ ನುಡಿದರು.

ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಗದಗ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಗದಗ ಮತ್ತು ಗದಗ ಶಹರ ವಲಯದ ಸಂಯುಕ್ತ ಆಶ್ರಯದಲ್ಲಿ ನಡೆದ 2023-24ನೇ ಸಾಲಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ತಾಲೂಕಾ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಕ್ರೀಡಾ ಪಟುಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ನರೇಂದ್ರ ಮೋದಿ ಅವರು ಖೇಲೋ ಇಂಡಿಯಾ ಯೋಜನೆಯನ್ನು ಜಾರಿಗೆ ತಂದಿದ್ದಾರೆ. ಕ್ರೀಡಾಪಟುಗಳು ಇದರ ಸದುಪಯೋಗ ಪಡೆದುಕೊಳ್ಳಲು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎಂ.ಎ ರಡ್ಡೇರ ಕ್ರೀಡಾ ಜೋತಿ ಸ್ವೀಕರಿಸಿದರು. ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್ ಬುರಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಡಾ.ವೆಂಕಟೇಶ ರಾಠೋಡ, ಗದಗ ಶಹರ ಟಿಪಿಒ ಜಿ.ಎಂ ಜಗದೀಶ್, ಎಂ.ಎಸ್ ಕುಚಬಾಳ, ಜಯಲಕ್ಷ್ಮೀ ಬಿ.ಅಣ್ಣಿಗೇರಿ, ಎಸ್.ಸಿ ನಾಗರಳ್ಳಿ, ಎಸ್.ಕೆ ಮಂಗಳಗುಡ್ಡ, ರವಿ ಕೋಟಿ ಮುಂತಾದರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕರಾದ ಪಿ.ಕೆ ಕುಬೇರ, ಎಚ್.ಬಿ ಕುರಹಟ್ಟಿ, ಪಿ.ಎಸ್ ಹಬೀಬ್ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್ ಬುರಡಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಬಿ ಮುಳಗುಂದ ಪ್ರತಿಜ್ಞಾವಿಧಿ ಬೋಧಿಸಿದರು. ಜಯಲಕ್ಷ್ಮೀ ಬಿ.ಅಣ್ಣಿಗೇರಿ ನಿರೂಪಣೆ ಮಾಡಿದರು. ಎಂ.ಎಸ್ ಕುಚಬಾಳ ವಂದಿಸಿದರು.

> ಸರಕಾರಿ ಹಾಗೂ ಅನುದಾನಿತ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರನ್ನು ಸರಕಾರ 10 ವರ್ಷಗಳಿಂದ ನೇಮಕ ಮಾಡಿಲ್ಲ. ಇದರಿಂದ ಕ್ರೀಡೆಯಲ್ಲಿ ಮಕ್ಕಳು ಹಿಂದುಳಿಯುವಂತಾಗಿದೆ. ಖಾಲಿಯಾದ ಹುದ್ದೆಗಳನ್ನು ನೇಮಕ ಮಾಡಿಕೊಳ್ಳದಿರುವದರಿಂದ ಸಿಪಿಇಡಿ ಕಾಲೇಜುಗಳು ಬಂದ್ ಆಗಿವೆ. ಸರ್ಕಾರ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸುತ್ತೇನೆ.
>
> **- ಎಸ್.ವಿ ಸಂಕನೂರ.**
> ವಿ.ಪ ಸದಸ್ಯರು.

**ಗಣೇಶೋತ್ಸವ ಮಂಡಳಿ ಅಳವಡಿಸಿದ ಗುಟಕಾ ಜಾಹೀರಾತು ತೆರವುಗೊಳಿಸಲು ಮನವಿ**

# ಗುಟಕಾ ಕಂಪನಿಗಳು ಭಕ್ತರ ಭಾವನೆಗಳೊಂದಿಗೆ ಚೆಲ್ಲಾಟವಾಡುತ್ತಿವೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಾದ್ಯಂತ ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳು ಸಾರ್ವಜನಿಕರ ಆರೋಗ್ಯಕ್ಕೆ ಮಾರಕವಾಗಿರುವ ಗುಟಕಾ ಜಾಹೀರಾತು ಫಲಕಗಳನ್ನು ಅಳವಡಿಸಿ ಸಾರ್ವಜನಿಕರನ್ನು ಗುಟಕಾ ಸೇವನೆಗೆ ಪ್ರಚೋದಿಸುತ್ತಿರುವದನ್ನು ವಿರೋಧಿಸಿ ಶ್ರೀರಾಮ ಸೇನಾ ಕಾರ್ಯಕರ್ತರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಕೂಡಲೇ ಜಾಹೀರಾತು ಫಲಕಗಳನ್ನು ತೆರವುಗೊಳಿಸುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನೆಯ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ, ಸಾರ್ವಜನಿಕ ಗಣೇಶೋತ್ಸವದಲ್ಲಿ ಪ್ರತಿಷ್ಠಾಪಿಸಲಾಗಿರುವ ಗಣೇಶನ ದರ್ಶನಕ್ಕೆ ಆಗಮಿಸುವ ಭಕ್ತರು ಗುಟಕಾ ಕಂಪನಿಗಳ ಜಾಹೀರಾತು ನೋಡುವಂತಾಗಿದೆ. ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳು ಹಾಗೂ ಗುಟಕಾ ಕಂಪನಿಗಳ ಕ್ರಮ ಹಿಂದೂಗಳ ಭಾವನೆಗೆ ಧಕ್ಕೆ ತರುತ್ತಿದ್ದು, ಗುಟಕಾ ಕಂಪನಿಗಳು ಮುಗ್ಧ ಭಕ್ತರ ಭಾವನೆಗಳೊಂದಿಗೆ ಚೆಲ್ಲಾಟವಾಡುತ್ತಿದೆ ಆರೋಪಿಸಿದರು.

ಅವಳಿ ನಗರದಲ್ಲಿನ ಸಾರ್ವಜನಿಕ ಗಣೇಶೋತ್ಸವ ಮಂಡಳಿಗಳು ಕೇವಲ 10 ಸಾವಿರ ರೂಪಾಯಿಗಳ ದೇಣಿಗೆಯ ಆಸೆಯಿಂದ ಜನತೆಯ ಆರೋಗ್ಯಕ್ಕೆ ಮಾರಕವಾಗು ಗುಟಕಾ ಜಾಹೀರಾತು ಫಲಕಗಳನ್ನು ಅಳವಡಿಸುತ್ತಿವೆಯೆಂದು ಆತಂಕ ವ್ಯಕ್ತಪಡಿಸಿದರು.

ಬಹಿರಂಗವಾಗಿ ಜಾಹೀರಾತು ಅಳವಡಿಸಿದ ಗುಟಕಾ ಕಂಪನಿಗಳ ಮಾಲಿಕರ ಮೇಲೆ ಜಿಲ್ಲಾಡಳಿತ ಸ್ವಯಂಪ್ರೇರಣೆಯಿಂದ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಅಳವಡಿಸಿದ ಗಣೇಶೋತ್ಸವ ಮಂಡಳಿಗಳ ಮೇಲೆಯೂ ಸೂಕ್ತ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು. ಮನವಿ ಸ್ವೀಕರಿಸಿದ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ, ಸೂಕ್ತ ಕ್ರಮಕ್ಕೆ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸೋಮು ಗುಡಿ, ಶಿವಯೋಗಿ ಹಿರೇಮಠ, ಕಿರಣ ಹಿರೇಮಠ, ವೆಂಕಟೇಶ ದೊಡ್ಡಮನಿ, ಸತೀಶ ಕುಂಬಾರ, ಗುರುರಾಜ ಮರಾಠಿ, ಶಶಿಧರ ಗಟ್ಟಿ, ರಮೇಶ ಹಲಗಿ, ಶಿವಕುಮಾರ ಕೊರ್ಲಹಳ್ಳಿ, ವಿನಾಯಕ ಉರಗಲ್, ಮಂಜು ಹೆಗಡೆ, ಪ್ರವೀಣ ಕೊಳ್ಳಿ, ಮಂಜುನಾಥ ಬೇಲೇರಿ, ಕಾರ್ತಿಕ ಭಜಂತ್ರಿ, ಬಸವರಾಜ ಬನ್ನಿಮರದ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka